ಸಂಪುಟ : 9 ಸಂಚಿಕೆ 237 ಪುಟ : 4 ಬೆಲೆ: 3.00 ಮಂಗಳವಾರ ಅಕ್ಟೋಬರ್ 29 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 237 Pages : 4 Price : 3.00 Tuesday October 29 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್-29 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ** : ವಾರ್ಡ್ ನಂ. 22 – ಗಂಗಿಮಡಿ, ಯಲ್ಲಮ್ಮನ ಗುಡಿ, 1600 , 1800 ಮನೆಗಳು, ದೊಡ್ಡ ಮಸೂತಿ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 35 – ಬಯಲು ಆಂಜನೇಯ ಗುಡಿ ಲೈನ್, ಆದರ್ಶ ನಗರ, ನೀಲಮ್ಮತಾಯಿ ಮಠ ವಿವಿಧ ಕೆಲವು ಭಾಗಗಳು. ವಾರ್ಡ್ ನಂ. 26 – ಅಬ್ಬಿಗೇರಿ ಕಾಂಪೌಂಡ್, ಕಮ್ಮಾರ ಸಾಲ, ಸಾಲ ಮನೆ, ತೆಗ್ಗಿನ ಲಾಟ್, ಹಳೆ ಡಿಸಿ ಆಫೀಸ್ ಲೈನ್, ಉಡಚಮ್ಮನ ಗುಡಿ ಲೈನ್, ಮಕಾನಗಲ್ಲಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 16, 21 – ಗೌಳಿಯವರ ಲೈನ್, ಅಬ್ಬಿಗೇರಿ ಲೈನ್, ಗಂಗಿಮಡಿ ಹೊಸ ಲೈನ್, ಗುಡದೂರ ಸ್ವಾಮಿ ಮಠ, ಕುಂಬೇಶ್ವರ ನಗರ 4 ಭಾಗಗಳು, ರಹಮತ್ ನಗರ 4 ಭಾಗಗಳು, ಶರೀಫಜ್ಜನ ಗದ್ದುಗೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ 29 – ಕಲಾಮಂದಿರ ರಸ್ತೆ, ದೇವರಾಜ ಅರಸು ಹಾಸ್ಟೆಲ್ ಲೈನ್, ಸಾಯಿ ನಗರ, ಮಸೂತಿ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 7 – ಶಿವಾಜಿನಗರ ಪೂರ್ತಿ ಭಾಗಗಳು. ವಾರ್ಡ್ ನಂ. 1 – ಎಸ್ ಎಂ ಕೃಷ್ಣ ನಗರದ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗ ಸಂಸ್ಥೆಯಾಗಿದ್ದು, ವಿಜ್ಞಾನ, ತಂತ್ರಜ್ಞಾನ , ಇಂಜನೀಯರಿಂಗ್ ಕೃಷಿ ಮತ್ತು ವೈದ್ಯಕೀಯ ( ಸ್ಕೀಮ್ ) ವಿಷಯಗಳ ಸಂವಹನಕ್ಕೆ ದಿವ್ಯಾಂಗ ವ್ಯಕ್ತಿಯ ಅತ್ಯುತ್ತಮ ಪ್ರಯತ್ನಗಳನ್ನು ಗುರುತಿಸುವ ಉದ್ದೇಶದಿಂದ 2024–25ನೇ ಸಾಲಿನ ಕೆ.ಎಸ್.ಟಿ.ಎ ವಾರ್ಷಿಕ ಬಹುಮಾನ ( ದಿವ್ಯಾಂಗ ) ಕ್ಕೆ ಅರ್ಹರಿಂದ ಅರ್ಜಿ/ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ / ನಾಮ ನಿರ್ದೇಶನಗಳನ್ನು ಸಲ್ಲಿಸಲು ಜನವರಿ 28, 2025 ಕೊನೆಯ ದಿನವಾಗಿರುತ್ತದೆ. ಆಯ್ಕೆಯಾದ ವ್ಯಕ್ತಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್ ಸೈಟ್ www.kstacademy.in ನಲ್ಲಿ ಮಾರ್ಗಸೂಚಿ ವೀಕ್ಷಿಸಬಹುದಾಗಿದೆ.

### ಕನ್ನಡ ರಾಜ್ಯೋತ್ಸವ ಆಚರಣೆ ಕುರಿತು ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ

# ರಾಜ್ಯೋತ್ಸವ ಕಾರ್ಯಕ್ರಮ ಯಶಸ್ವಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವವನ್ನು ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಕನ್ನಡ ರಾಜ್ಯೋತ್ಸವ ಅಚರಣೆಯ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ, ಯಾವುದೇ ಲೋಪಗಳಿಲ್ಲದಂತೆ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಯವರು ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಬೇಕೆಂದು ಸೂಚಿಸಿದರು.

ಪ್ರತಿ ವರ್ಷದಂತೆ ಈ ವರ್ಷವೂ ಸಹ ಕನ್ನಡ ರಾಜ್ಯೋತ್ಸವದ ದಿನದ ಹಿಂದಿನ ದಿನ ಹಾಗೂ ಕನ್ನಡ ರಾಜ್ಯೋತ್ಸವದ ದಿನ ಎರಡು ದಿನ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ



ಕ್ರಮ ಕೈಗೊಳ್ಳಬೇಕು ಎಂದರು.

ಅಂದು ಬೆಳಿಗ್ಗೆ 7.30ಕ್ಕೆ ಗದಗ-ಬೆಟಗೇರಿ ನಗರಸಭೆಯ ಪದವಿಪೂರ್ವ ಕಾಲೇಜು ಆವರಣದಿಂದ ತಾಯಿ ಭುವನೇಶ್ವರಿಯ ಮೆರವಣಿಗೆಯು ವಿವಿಧ ವೃತ್ತಗಳಲ್ಲಿ ಸಂಚರಿಸಿ ನಂತರ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ತಲುಪಲಿದೆ. ಬೆ.9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸುವರು. ಕಾರ್ಯಕ್ರಮಕ್ಕೆ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು. ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜು ವಿದ್ಯಾರ್ಥಿಗಳು ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಕ್ರಮ ವಹಿಸಬೇಕೆಂದು ಸೂಚನೆ ನೀಡಿದರು.

ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಪರಿಣಿತರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಯೋಜನಾಧಿಕಾರಿ ನಿರ್ಮಲಾ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರು, ಯುವಜನ ಮತ್ತು ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಪೊಲೀಸ್ ಪಡೆ, ಹೋಮ್‌ಗಾರ್ಡ್, ಭಾರತ ಸೇವಾ ದಳಗಳಿಂದ ಪರೇಡ್, ಪಥ ಸಂಚಲನ ಜರುಗಲಿವೆ. ಕಾರ್ಯಕ್ರಮದ ಸ್ಥಳದ ಸ್ವಚ್ಛತೆ ಹಾಗೂ ಅತಿಥಿಗಳಿಗೆ ಆಸನದ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಕ್ರಮ ಕೈಗೊಳ್ಳಬೇಕು. ಶಿಷ್ಟಾಚಾರದನ್ವಯ ಅತಿಥಿ ಗಣ್ಯರ ಅಹ್ವಾನ ಹಾಗೂ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

# ನಿಯಮಾವಳಿಗಳ ತಿದ್ದುಪಡಿ ತರುವದು ಅನಿವಾರ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾಲಕ್ಕೆ ತಕ್ಕಂತೆ ಪರಿಸ್ಥಿತಿಗೆ ಹೊಂದಿಕೊಳ್ಳಲು ಕೆಲ ಸುಧಾರಣೆ ತರುವ ದೃಷ್ಟಿಯಿಂದ ಪ್ರತಿಯೊಂದು ಕ್ಷೇತ್ರದಲ್ಲಿ ಈ ಹಿಂದೆ ಇದ್ದ ನಿಯಮಗಳನ್ನು ತಿದ್ದುಪಡಿ ಮಾಡುತ್ತಾ ಬಂದಿದ್ದಾರೆ. ಅದು ಅಭಿವೃದ್ಧಿಯ ದೃಷ್ಟಿಯಿಂದ ಅವಶ್ಯ ಮತ್ತು ಅನಿವಾರ್ಯ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಅಭಿಪ್ರಾಯಪಟ್ಟರು.

ಅವರು ಸೋಮವಾರ ಬೆಂಗಳೂರಿನ ವಿಧಾನಸೌಧದ ಮೊದಲ ಮಹಡಿಯಲ್ಲಿ ನಡೆದ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಿಯಮಗಳನ್ನು ಕೂಲಂಕುಶವಾಗಿ ಪರಿಶೀಲಿಸಿ, ತಿದ್ದುಪಡಿ ತರಲು ರಚಿಸಲಾಗಿರುವ ವಿಧಾನ ಪರಿಷತ್ತಿನ




ನಿಯಮಾವಳಿಗಳ ಸಮಿತಿಯ ಪ್ರಾರಂಭಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶತಮಾನದ ಇತಿಹಾಸ ಹೊಂದಿರುವ ಕರ್ನಾಟಕ ವಿಧಾನ ಪರಿಷತ್ತು ತನ್ನದೇ ಆದ ಘನತೆ ಗೌರವವನ್ನು ಹೊಂದಿದೆ. ಇದನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಕೆಲ ನಿಯಮಾವಳಿಗಳನ್ನು ಆಡಳಿತಾತ್ಮಕ ಸುಧಾರಣೆಯ ದೃಷ್ಟಿಯಿಂದ ತಿದ್ದುಪಡಿ ತರುವುದು ಇಂದು ಅತ್ಯವಶ್ಯವಾಗಿದೆ. ಅದಕ್ಕಾಗಿ ಸಮಿತಿಯನ್ನು ರಚಿಸಿ ಕೂಲಂಕುಶವಾಗಿ ಪರಿಶೀಲಿಸಿ ಒಟ್ಟಾಭಿಪ್ರಾಯವನ್ನು ಸಂಗ್ರಹಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರಾದ ಉಪಸಭಾಪತಿ ಎಂ.ಕೆ. ಪ್ರಾಣೇಶ್, ವಿ.ಪ. ಸದಸ್ಯರಾದ ಎಚ್.ವಿಶ್ವನಾಥ್, ಬಿ.ಕೆ. ಹರಿಪ್ರಸಾದ್, ಭಾರತಿ ಶೆಟ್ಟಿ, ಎಸ್.ವಿ. ಸಂಕನೂರ, ಕೆ.ಎ. ತಿಪ್ಪೇಸ್ವಾಮಿ, ಕೆ.ಎಸ್. ನವೀನ್, ಮಂಜುನಾಥ್ ಭಂಡಾರಿ ಸೇರಿದಂತೆ ವಿಧಾನ ಪರಿಷತ್ತಿನ ಹಿರಿಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಶಿವಾನುಭವ ಸಂಪದ-6 ಕಾರ್ಯಕ್ರಮದಲ್ಲಿ ಮಂಜುನಾಥ ಶಾಸ್ತ್ರಿ

# ಶರಣರಿಗೆ ಮರಣವೇ ಮಹಾನವಮಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅನುಭಾವಿಗಳನ್ನು, ಸತತ ಧರ್ಮದ ಹಾದಿಯಲ್ಲಿ ನಡೆಯುವವರನ್ನು ಶರಣರು ಎಂದು ಕರೆಯಲಾಗುತ್ತಿದೆ. ಸಂಸಾರಿಗಳಾಗಿದ್ದೂ ಧರ್ಮದ ಹಾದಿ ತುಳಿದ ಅದೆಷ್ಟೋ ಜನ ಶರಣರು ಈ ನಾಡಿನಲ್ಲಿ ಆಗಿ ಹೋಗಿದ್ದಾರೆ. ಅವರಿಗೆ ಬಸವಣ್ಣನವರೇ ಎಲ್ಲವೂ ಆಗಿದ್ದರು. ಶರಣರು ಮರಣಕ್ಕೆ ಎಂದಿಗೂ ಹೆದರಿದವರಲ್ಲ. ಹುಟ್ಟಿದ ಮೇಲೆ ಸಾವು ಖಚಿತ ಎಂಬುದನ್ನು ತಿಳಿದುಕೊಂಡಿದ್ದ ಅವರು ನಿಜವಾದ ಶರಣನಿಗೆ ಮರಣವೇ ಎಂದಿಗೂ ಮಹಾನವಮಿ ಎಂದು ನಂಬಿಕೊಂಡಿದ್ದರು ಎಂದು ಮಂಜುನಾಥ ಶಾಸ್ತ್ರಿಗಳು ಹೇಳಿದರು.

ಸಮೀಪದ ನಿಡಗುಂದಿ ಗ್ರಾಮದ ಶ್ರೀ ಕುಮಾರೇಶ್ವರ ಬಿಲ್ವಪತ್ರೆ ವನದಲ್ಲಿ ಜರುಗಿದ ಶಿವಾನುಭವ ಸಂಪದ-6 ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಶರಣರ ಸಂಪತ್ತಿನ ಕಾಲವೆಂದರೆ ಅದು 12ನೇ ಶತಮಾನ. ಆಗ ಕೇವಲ ಪುರುಷರಷ್ಟೇ ಅಲ್ಲದೆ




ಮಹಿಳೆಯರೂ ಕೂಡ ವಚನಗಳನ್ನು ರಚನೆ ಮಾಡುವ ಸಾಮರ್ಥ್ಯವನ್ನು ಬೆಳೆಸಿಕೊಂಡಿದ್ದರು. ತಮ್ಮ ನಿತ್ಯದ ಬದುಕಿನ ಅನುಭವಗಳನ್ನೇ ಅವರು ವಚನಗಳನ್ನಾಗಿಸಿ ಹೊಸೆದರು. ಪ್ರತಿಯೊಬ್ಬ ವಚನಕಾರನೂ ತಮ್ಮ ತಮ್ಮ ಅಂಕಿತನಾಮವನ್ನಿಟ್ಟುಕೊಂಡು ವಚನಗಳ ರಚನೆ ಮಾಡಿದ್ದು, ಆಗ ರಚನೆಯಾದ ವಚನಗಳು ಇಂದಿಗೂ ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದರು.

ಶ್ರೀ ಅಡವಿಸಿದ್ದೇಶ್ವರ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ನೇತೃತ್ವ ವಹಿಸಿದ್ದರು. ಶ್ರೀ ಷಣ್ಮುಖಪ್ಪಜ್ಜನವರು ಸಮ್ಮುಖ ವಹಿಸಿದ್ದರು. ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆ ಮೂಡಲಗಿ ತಾಲೂಕಿನ ಶಿವಪೂರ(ಹ) ಗ್ರಾಮದ ಸದ್ಭಕ್ತರು ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳವರಿಗೆ ಗೌರವ ಸಮರ್ಪಣೆ ಮಾಡಿದರು. ಅಕ್ಕಮಹಾದೇವಿ ಮಹಿಳಾ ವೇದಿಕೆಯ ತಾಯಂದಿರಿಂದ ಮತ್ತು ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಸಮಾರಂಭದಲ್ಲಿ ಅನೇಕ ಸಾಧಕರನ್ನು ಸನ್ಮಾನಿಸಲಾಯಿತು.

**ಬಾಕ್ಸ್**

ಜೀವನದ ಪ್ರತಿ ಹಂತವನ್ನೂ ಶರಣರು ವಚನಗಳಲ್ಲಿ ವಿವರಿಸಿ, ಮರಣವೆಂದರೆ ಯಾಕೆ ಹೆದರಬಾರದು ಎಂಬುದರ ಬಗ್ಗೆಯೂ ವಿವರಣೆಯನ್ನು ನೀಡಿದ್ದಾರೆ. ಆದ್ದರಿಂದ ಯಾರು ವಚನಗಳನ್ನು ಸರಿಯಾಗಿ ಪಚನ ಮಾಡಿಕೊಂಡಿದ್ದಾರೆಯೋ ಅವರೆಂದಿಗೂ ಸಾವಿಗೆ ಅಂಜುವುದಿಲ್ಲ. ಬದಲಾಗಿ ಅವರು ಸಾವನ್ನೇ ಮಹಾನವಮಿ ಎಂದು ತಿಳಿದುಕೊಳ್ಳುತ್ತಾರೆ ಎಂದು ಶಾಸ್ತ್ರಿಗಳು ಹೇಳಿದರು.

# ಅಥ್ಲೇಟಿಕ್ಸ್‌ನಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ನಡೆದ ಪ್ರೌಢಶಾಲಾ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ವೈಯಕ್ತಿಕ ಸ್ಪರ್ಧೆ(ಅಥ್ಲೇಟಿಕ್ಸ್)ಯಲ್ಲಿ ಭಾಗವಹಿಸಿದ ಕದಡಿಯ ಸರಕಾರಿ ಪ್ರೌಢಶಾಲೆಯ ಕ್ರೀಡಾಪಟುಗಳು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಬಾಲಕಿಯರ ವಿಭಾಗದಲ್ಲಿ ನವರೀನ ನದಾಫ್ 800 ಮೀ. ಓಟ ದ್ವಿತೀಯ, ಜ್ಯೋತಿ ಕುರಹಟ್ಟಿ 3000 ಮೀ. ಓಟ ದ್ವಿತೀಯ, ಚಿಂಚನಾ ಬೆಟಗೇರಿ ಗುಂಡು ಎಸೆತದಲ್ಲಿ ದ್ವಿತೀಯ, ಚಕ್ರ ಎಸೆತ ದ್ವಿತೀಯ, ಪೂಜಾ ಹಾಲವರ 3000 ಮೀ. ನಡಿಗೆಯಲ್ಲಿ ಪ್ರಥಮ, 4*400 ಮೀ. ರೀಲೆ ಪ್ರಥಮ ಹಾಗೂ ನವರೀನ ನದಾಫ, ಜ್ಯೋತಿ ಕುರಹಟ್ಟಿ, ಅನು ಮೇಗಲಮನಿ, ತೇಜಸ್ವಿನಿ ಮೇಗಲಮನಿ, ಬಾಲಕರ ವಿಭಾಗದಲ್ಲಿ ಹೊನ್ನೇಶ ಭಗವತಿ 3000 ಮೀ. ಓಟದಲ್ಲಿ ದ್ವಿತೀಯ, ಯಲ್ಲಪ್ಪ ಕಿರೇಸೂರ 5000 ಮೀ. ನಡಿಗೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಗ್ರಾ.ಪಂ ಅಧ್ಯಕ್ಷರು, ಸರ್ವ ಸದಸ್ಯರು, ಎಸ್.ಡಿ.ಎಮ್.ಸಿ. ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು, ಕದಡಿ ಗ್ರಾಮದ ಗುರು-ಹಿರಿಯರು, ಕ್ರೀಡಾಭಿಮಾನಿಗಳು ಶುಭ ಕೋರಿ, ಅಭಿನಂದನೆ ಸಲ್ಲಿಸಿದ್ದಾರೆ.



# ಆಯುರ್ವೇದ ಜಾಥಾ

■ ವಿಜಯಸಾಕ್ಷಿ ಸುದ್ದಿ, ಗದಗ

'ಶ್ರೀ ಧನ್ವಯಂತಿ ಜಯಂತಿ' 9ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯ ಪ್ರಯುಕ್ತ ಸೋಮವಾರ ಆಯುರ್ವೇದ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಮತ್ತು ಡಿವೈಎಸ್‌ಪಿ ಇನಾಮದಾರ ಅವರು ಜಾಥಾಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಆಯುಷ್ ಇಲಾಖೆಯ ಅಧಿಕಾರಿ ಡಾ. ಮಲ್ಲಿಕಾರ್ಜುನ ಉಪ್ಪಿನ, ಡಿಜಿಎಂ ಆಯುರ್ವೇದಿಕ ಕಾಲೇಜಿನ ಪ್ರಿನ್ಸಿಪಾಲ ಡಾ. ಸಂತೋಷ ಬೆಳವಡಿ, ಡಾ. ವೀರೇಶ




ಕೊಟ್ರಶೆಟ್ಟರ್, ವೈದ್ಯಾಧಿಕಾರಿಗಳು, ಕಾಲೇಜು ವಿದ್ಯಾರ್ಥಿಗಳು ಇದ್ದರು. ಆಯುರ್ವೇದ ಜಾಥಾವು ನಗರದ ಮುನ್ಸಿಪಲ್ ಕಾಲೇಜಿನಿಂದ ರೋಟರಿ ಸರ್ಕಲ್, ಟಾಂಗಾ ಕೂಟ, ಮಹೇಂದ್ರಕರ ಸರ್ಕಲ್, ಗಾಂಧಿ ಸರ್ಕಲ್‌ನಿಂದ ಮುನ್ಸಿಪಲ್ ಕಾಲೇಜಿಗೆ ಬಂದು ತಲುಪಿತು.

## 'ನಿರಂತರ ಸಾಹಿತ್ಯ ಪುರಸ್ಕಾರ-2024' ಕಾರ್ಯಕ್ರಮದಲ್ಲಿ ಬಿ. ಶ್ರೀನಿವಾಸ್ ಆತಂಕ

# ಭಾವಗಳಿಲ್ಲದ ಬದುಕು ಅಪಾಯಕರ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಂಕಟ, ತಳಮಳ, ಹಸಿವು, ಅಸಹಾಯಕತೆಗಳಿಗೆ ಮಾತ್ರವಲ್ಲ, ಭಾವನೆಗಳಿಗೂ ಬೆಲೆ ಕೊಡದೆ ಅಣುಬಾಂಬುಗಳ ರೀತಿ ಜನ ಬದಲಾಗುತ್ತಿರುವದು ಜಗತ್ತಿನ ಅಪಾಯದ ಸಂಕೇತದ ಸೂಚನೆ ಎಂದು ಹಿರಿಯ ಕವಿ, ಕತೆಗಾರ, ದಾವಣಗೆರೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿ ಬಿ. ಶ್ರೀನಿವಾಸ್ ಆತಂಕ ವ್ಯಕ್ತಪಡಿಸಿದರು.

ಅವರು ಗದಗಿನ ನಿರಂತರ ಪ್ರಕಾಶನ, ಮಕಾನದಾರ ಸಾಹಿತ್ಯ ಪ್ರತಿಷ್ಠಾನ, ಹಾವೇರಿ ಸಾಹಿತಿ ಕಲಾವಿದರ ಬಳಗದ ಆಶ್ರಯದಲ್ಲಿ ಜರುಗಿದ 'ನಿರಂತರ ಸಾಹಿತ್ಯ ಪುರಸ್ಕಾರ-2024' ಸ್ವೀಕರಿಸಿ ಮಾತನಾಡಿದರು.

ತಸ್ಮಿನ ಪ್ರಕಾಶನದಿಂದ ಹಜರೇ ಸಾಬ್ ಬಿ.ನದಾಫ್ ಅವರ ಬದುಕು ಛಂದಗೀತ ಮತ್ತು ನಕ್ಷತ್ರ ದಾರಿ ಸಂಕಲನಗಳನ್ನು ಹಿರಿಯ ಜಾನಪದ ವಿದ್ವಾಂಸ ಶಂಬು ಬಳಿಗಾರ್, ಸಾಹಿತಿ ಎಚ್.ಉಮೇಶಪ್ಪ ಅವರು ಜನಾರ್ಪಣೆಗೊಳಿಸಿದರು.

ಕವಿ, ಪ್ರಕಾಶಕ ಎ.ಎಸ್. ಮಕಾನದಾರ ಮಾತನಾಡಿ, ಪ್ರಕಾಶನ ಬೆಳೆದುಬಂದ ಬಗೆ, ಕವಿ ನದಾಫ್ ಅವರ ಒಡನಾಟ, ಶ್ರೀನಿವಾಸ ಅವರ ಬದುಕು ಬರಹ ಸಮಾಜ ಮುಖಿ ಕಾರ್ಯಗಳ ಕುರಿತು ಮಾತನಾಡಿದರು. ಜಿಲ್ಲಾ ಕಸಾಪ ಅಧ್ಯಕ್ಷ ಲಿಂಗಯ್ಯ ಹಿರೇಮಠ್ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಡಾ. ಪುಷ್ಪ ಶಲವಡಿಮಠ, ಡಾ. ಮಹಾದೇವಿ ಕಣವಿ. ಡಾ. ಅಂಬಿಕಾ ಹಂಚಾಟೆ, ಪ್ರೊ. ಮಾರುತಿ ಶಿಡ್ಲಾಪೂರ, ಸಾಬೀನಾ ಬಾನು ನದಾಫ್, ಲಿಂಗರಾಜ ಸೊಟ್ಟಪ್ಪನವರ್, ಶಿವಕುಮಾರ್ ಚನ್ನಪ್ಪನವರ, ಮಾರುತಿ ತಳವಾರ, ನೂರ್ ಅಹ್ಮದ್ ನಾಗನೂರ್, ದೇವರಾಜ್ ಹುಣಸಿಕಟ್ಟಿ, ನಾಮದೇವ ಕಾಗದಗಾರ, ಚಂದ್ರಶೇಖರ್ ಕುಳೆನೂರ, ಕಲ್ಪಿತ ರಾಣಿ ಶ್ರೀನಿವಾಸ್, ಪ್ರತಿಭಾ ಗಾಂಜಿ, ಈರಣ್ಣ ಬೆಳದಡಿ, ಸಿ.ಎಸ್. ಮರಳಹಳ್ಳಿ, ಪತ್ರಕರ್ತ ಮಾಲತೇಶ ಅಂಗುರ್, ರವಿ, ಹುಚ್ಚನಗೌಡರ ನಿಂಗರಾಜ್ ಸುಳ್ಳಲ್ಲಿ, ಮೈನುದ್ದಿನ ಮೋರಟಗಿ, ನ್ಯಾಯವಾದಿ ಸಲೀಂ ಜವಳಿ, ಹಜರೇಸಾಬ ಬಿ.ನದಾಫ್ ಮತ್ತು ಶ್ರೀನಿವಾಸ್ ಅವರ ಕುಟುಂಬದ ಸದಸ್ಯರು ಪಾಲ್ಗೊಂಡಿದ್ದರು.

ಶಿಕ್ಷಕ, ಗಾಯಕ ನರಸಿಂಹ ಕೋಮಾರ ನದಾಫ್ ಅವರ ಕವಿತೆಗಳಿಗೆ ರಾಗ ಸಂಯೋಜನೆ ಮಾಡಿ ಪ್ರಸ್ತುತಪಡಿಸಿದರು. ಯುವ ಲೇಖಕಿ ಅನಿತಾ ಮಂಜುನಾಥ್ ಮತ್ತು ಗೂಳಪ್ಪ ಅರಳಿಕಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

ಹಿರಿಯ ಬಂಡಾಯ ಸಾಹಿತಿ ಸತೀಶ್ ಕುಲಕರ್ಣಿ ಪುರಸ್ಕಾರ ಪ್ರದಾನ ಮಾಡಿ ಮಾತನಾಡಿ, ಕವಿಯ ನೋವು-ನಲಿವುಗಳನ್ನು ಗುಣಿಸಿ, ಭಾಗಿಸಿ, ಕಳೆದು, ಕೂಡಿಸಿ ಉತ್ತರ ಕಂಡುಕೊಳ್ಳುವ ಭಾವ ಗಣಿತದ ಲೆಕ್ಕಾಚಾರ ಭಾವ ಪ್ರಧಾನ ಕಾವ್ಯಗಳಲ್ಲಿ ಬಿಂಬಿತವಾದಾಗ ಸಾಹಿತ್ಯ ವಲಯಕ್ಕೆ ಪುಷ್ಠಿ ದೊರೆತಂತೆ ಆಗುತ್ತದೆಂದರು.

## ಹಿರೇಮಠದ ಜಾತ್ರಾಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಷ.ಬ್ರ.ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು

# ನ. 16ರಿಂದ ಹಿರೇಮಠದ ಜಾತ್ರೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಹಿರೇಮಠದ ಜಾತ್ರಾಮಹೋತ್ಸವವು ನವೆಂಬರ್ 16ರಿಂದ 25ರವರೆಗೆ ನಡೆಯಲಿದೆ ಎಂದು ಷ.ಬ್ರ.ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಶ್ರೀಮಠದ ಆವರಣದಲ್ಲಿ ರವಿವಾರ ಸಂಜೆ ನಡೆದ ಜಾತ್ರಾಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಅವರು ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ನ. 16ರಿಂದ 10ದಿನಗಳ ಕಾಲ ಹಾನಗಲ್ಲ ಗುರು ಕುಮಾರೇಶ್ವರರ ಪುರಾಣ ಪ್ರಾರಂಭವಾಗಲಿದ್ದು, ಅನ್ನದಾನ ಶಾಸ್ತ್ರಿಗಳು ಈ ಪುರಾಣವನ್ನು ನಡೆಸಿಕೊಡಲಿದ್ದಾರೆ. ನ. 25ಕ್ಕೆ ಬೆಳಿಗ್ಗೆ ಕರ್ತೃ ಗದ್ದುಗೆಗೆ ಅಭಿಷೇಕ, ಅಯ್ಯಾಚಾರ ಮತ್ತು ಇತರೆ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿದ್ದು, ಬೆ. 10ಕ್ಕೆ ಧಾರ್ಮಿಕ ಗ್ರಂಥಗಳ ಪಲ್ಲಕ್ಕಿ ಮಹೋತ್ಸವವು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜರುಗಲಿದೆ ಎಂದು ಶ್ರೀಗಳು ತಿಳಿಸಿದರು.



ನ. 24ರಂದು ರೋಣ ಶಾಸಕ ಜಿ.ಎಸ್. ಪಾಟೀಲರ ಸುವರ್ಣ ದಾಂಪತ್ಯದ ಅಂಗವಾಗಿ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ದಾನಿಗಳಿಗೆ ಸನ್ಮಾ, ಸಾಧಕರಿಗೆ ಗೌರವಾರ್ಪಣೆ ಕಾರ್ಯಕ್ರಮಗಳು ಜಾತ್ರಾ ಮಹೋತ್ಸವದಲ್ಲಿ ಜರುಗಲಿದೆ ಎಂದು ಶ್ರೀಗಳು ತಿಳಿಸಿದರು. ಇದೇ ಸಂದರ್ಭದಲ್ಲಿ ಶ್ರೀ ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ವಾರ್ಷಿಕೋತ್ಸವ ಮತ್ತು ಸಾಧಕ ಮಹಿಳೆಯರ ಸನ್ಮಾನ ಸಮಾರಂಭವೂ ಜರುಗಲಿದೆ ಎಂದರು.

ಪಾದಯಾತ್ರೆ ಕಾರ್ಯಕ್ರಮವು ನ. 16ರಿಂದ ಪ್ರತಿ ದಿನ ಬೆಳಿಗ್ಗೆ ಜರುಗುವುದು ಎಂದು ತಿಳಿಸಿದ ಶ್ರೀಗಳವರು, ಭಕ್ತರು ಶ್ರೀಮಠದ ಆಸ್ತಿಯಾಗಿದ್ದು, ಎಲ್ಲರೂ ಸೇರಿ ಈ ಉತ್ಸವವವನ್ನು ಯಶಸ್ವಿಗೊಳಿಸೋಣ ಎಂದರು. ಸಭೆಯನ್ನುದ್ದೇಶಿಸಿ ವರ್ತಕ ಎಂ.ಎಂ. ಪಲ್ಲೇದ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ಡಾ. ಕೆ.ಬಿ. ಧನ್ನೂರ ಮತ್ತು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ ಅನೇಕ ಸಲಹೆ-ಸೂಚನೆಗಳನ್ನು ನೀಡಿದರು.

### ಪಾದಯಾತ್ರೆ

ಈ ಬಾರಿಯ ಜಾತ್ರೆಯ ವಿಶೇಷತೆಯಾಗಿ, ಧರ್ಮ ಜಾಗೃತಿಗಾಗಿ ಪಟ್ಟಣದಾದ್ಯಂತ ಪಾದಯಾತ್ರೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಪಟ್ಟಣದ 17 ವಾರ್ಡ್‌ಗಳ ಎಲ್ಲ ಓಣಿಗಳಲ್ಲಿ ಪ್ರತಿ ದಿನ ಬೆಳಿಗ್ಗೆ ಪಾದಯಾತ್ರೆ ನಡೆಸುವ ಮುಖಾಂತರ ಧರ್ಮ ಜಾಗೃತಿ ಮಾಡುವ ಅಭಿಲಾಷೆಯನ್ನು ಹೊಂದಲಾಗಿದೆ ಎಂದು ಶ್ರೀಗಳು ಹೇಳಿದರು.

ಸಭೆಯಲ್ಲಿ ರುದ್ರಮುನಿ ಹಿರೇಮಠ, ನಿಂಗಪ್ಪ ಕಣವಿ, ಶಿವನಗೌಡ ಪಾಟೀಲ, ರಮೇಶ ಕಳಕೊಣ್ಣವರ, ಶರಣಪ್ಪ ಜುಟ್ಲ, ಬಸವರಾಜ ಕಳಕೊಣ್ಣವರ, ದ್ಯಾಂಪೂರ, ಮಲ್ಲಾಪೂರ, ಕೋಚಲಾಪೂರ, ಕೋಡಿಕೊಪ್ಪ, ತೋಟಗಂಟಿ ಗ್ರಾಮದ ಭಕ್ತರು ಮುಂತಾದವರಿದ್ದರು.

# ಗ್ರಾಮದ ಸಮಗ್ರ ಅಭಿವೃದ್ಧಿ ದತ್ತು ಗ್ರಾಮದ ಉದ್ದೇಶ : ಇಓ ದುಂಡಪ್ಪ ತುರಾದಿ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಗ್ರಾಮಗಳು ಪ್ರತಿರಂಗದಲ್ಲಿ ಅಭಿವೃದ್ಧಿ ಹೊಂದಬೇಕು ಎಂಬ ದತ್ತು ಗ್ರಾಮದ ಉದ್ದೇಶ, ಗ್ರಾಮದ ಪ್ರತಿ ಕುಟುಂಬವು ಎಲ್ಲಾ ಮೂಲಭೂತ ಸೌಕರ್ಯ ಹೊಂದಬೇಕು ಹಾಗೂ ಮಾದರಿ ಗ್ರಾಮ ಮಾಡುವದೇ ದತ್ತು ಗ್ರಾಮದ ಮುಖ್ಯ ಉದ್ದೇಶ ಎಂದು ತಾ.ಪಂ. ಇಓ ದುಂಡಪ್ಪ ತುರಾದಿ ಹೇಳಿದರು.

ತಾಲೂಕಿನ ಬೆಟಗೇರಿ ಗ್ರಾ.ಪಂ. ಮೋರನಹಳ್ಳಿ ಗ್ರಾಮದಲ್ಲಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ದತ್ತು ಗ್ರಾಮವಾಗಿ ಅಭಿವೃದ್ಧಿ ಪಡಿಸುವ ಕುರಿತು ಗ್ರಾಮಸ್ಥರೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಗ್ರಾಮದ ಪ್ರತಿ ವಾರ್ಡಿಗೆ ಅಧಿಕಾರಿಗಳು ಭೇಟಿ ನೀಡಲಿದ್ದು ಗ್ರಾಮಸ್ಥರು ತಮ್ಮ ವಾರ್ಡಿಗೆ ಅವಶ್ಯ ಇರುವ ಹಾಗೂ ಗ್ರಾಮಕ್ಕೆ ಬೇಕಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಮಾಹಿತಿ ನೀಡಬೇಕು. ನರೇಗಾ ಯೋಜನೆ ಜೊತೆಗೆ, ಗ್ರಾಪಂ, ಕೃಷಿ ಇಲಾಖೆ, ತೋಟಗಾರಿಕೆ, ಅರಣ್ಯ, ರೇಷ್ಮೆ ಇತರ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವದು ಕಾರಣ ಗ್ರಾಮಸ್ಥರು ಅವಶ್ಯ ಇರುವ ಯೋಜನೆಗಳ ಬಗ್ಗೆ ಮಾಹಿತಿ ನೀಡಬೇಕು ಎಂದರು.



ತಾ.ಪಂ ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ ಮಾತನಾಡಿ, ನರೇಗಾ ಯೋಜನೆಯಡಿ, ವೈಯಕ್ತಿಕ, ಸಮುದಾಯ ಕಾಮಗಾರಿ ಕೈಕೊಳ್ಳಲಾಗುವದು. ತಾಂತ್ರಿಕ ಸಹಾಯಕರು ವಾರ್ಡಗೆ ಬೇಟಿ ನೀಡಿದಾಗ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಬೀದಿ ದೀಪ, ಚರಂಡಿ ವ್ಯವಸ್ಥೆ, ಸಿಸಿ ರಸ್ತೆ, ಶೌಚಾಲಯ, ಶಾಲಾ ಮೈದಾನ ಅಭಿವೃದ್ಧಿ, ಶಾಲಾ ಆವರಣ ಗೋಡೆ, ಸಮುದಾಯ ಭವನ, ಬೋರವೆಲ್ ರೀಚಾರ್ಜ ಪಿಟ್, ಭಾವಿಗಳ ನಿರ್ಮಾಣ. ಮುಂತಾದ ಕಾಮಗಾರಿ ವಿವಿಧ ಇಲಾಖೆಯ ಸಹಯೋಗದಲ್ಲಿ ಕೈಕೊಳ್ಳಲಾಗುವದು. ಕಾರಣ ಗ್ರಾಮಸ್ಥರು ಸಮಗ್ರ ಕ್ರಿಯಾ ಯೋಜನೆ ತಯಾರಿಸಲು ಕಾಮಗಾರಿಗಳ ಮಾಹಿತಿ ನೀಡಿ ಎಂದರು.

ಜಾಥಾಕ್ಕೆ ಚಾಲನೆ:-ಪ್ರಸಕ್ತದಲ್ಲಿ ಜರುಗುತ್ತಿರುವ ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ ಅಭಿಯಾನಕ್ಕೆ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ಹಾಗು ಗ್ರಾ.ಪಂ ಅಧ್ಯಕ್ಷರು ದುರಗಪ್ಪ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾ. ಪಂ ಸದಸ್ಯರಾದ ಅಂದಪ್ಪ ಚಿಲಗೋಡ್ರ, ಭರಮಪ್ಪ ಹುಳ್ಳಿ, ಎಸ್‌ಡಿಎಮ್‌ಸಿ ಅಧ್ಯಕ್ಷ ಮಂಜುನಾಥ ಸಂಗಟಿ, ಪ್ರಮುಖರಾದ ಶರಣಪ್ಪ ಮಡಿವಾಳರ, ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ,ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ವೆಂಕಪ್ಪ ಶಿಗನಹಳ್ಳಿ, ಪಿಡಿಓ ದಾನಪ್ಪ ಸಂಗಟಿ, ತಾಂತ್ರಿಕ ಸಹಾಯಕ ಪ್ರವೀಣ ಗದಗ, ಬೇರ್ ಫೂಟ್ ಟೆಕ್ನಿಷಿಯನ್ ಮಾಳಪ್ಪ ದೇವರಮನಿ, ಗ್ರಾಮಸ್ಥರು ಇದ್ದರು.

# ಭ್ರಷ್ಟಚಾರ ನಿರ್ಮೂಲನೆಗೆ ವಿದ್ಯಾರ್ಥಿಗಳ ಪಾತ್ರ ಬಹುಮುಖ್ಯ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ವಿದ್ಯಾರ್ಥಿಗಳು ಭ್ರಷ್ಟಚಾರದ ಕುರಿತು ಲೋಕಾಯುಕ್ತಕ್ಕೆ ಮಾಹಿತಿ ನೀಡುವುದರ ಮೂಲಕ ಭ್ರಷ್ಟಚಾರ ನಿರ್ಮೂಲನೆಯಲ್ಲಿ ವಿದ್ಯಾರ್ಥಿಗಳು ಬಹುಮುಖ್ಯ ಪಾತ್ರವಹಿಸಬೇಕು ಎಂದು ಲೋಕಾಯುಕ್ತ ಪ್ರಭಾರ ಡಿವೈಎಸ್ಪಿ ಚಂದ್ರಪ್ಪ ಇ ಟಿ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಭ್ರಷ್ಟಚಾರ ನಿಗ್ರಹ ಜಾಗೃತಿ ಅರಿವು ಸಪ್ತಾಹ -2024 ರ ಕಾರ್ಯಕ್ರಮವ ಉದ್ಘಾಟಿಸಿ ಮಾತನಾಡಿದರು.

1984 ರಲ್ಲಿ ಕರ್ನಾಟಕ ಲೋಕಾಯುಕ್ತ ಪ್ರಾರಂಭ ಆಗಿದ್ದು, ಇದರ ಮುಖ್ಯ ಕೆಲಸ ಭ್ರಷ್ಟಚಾರವನ್ನು ತಡೆಗಟ್ಟುವುದು ಎಲ್ಲರು ಸೇರಿ ಭ್ರಷ್ಟಚಾರವನ್ನು ತಡೆಗಟ್ಟಬೇಕು. ಯಾರಾದ್ರೂ ಸರಕಾರಿ ನೌಕರರು ಕೆಲಸ ನಿರ್ವಹಿಸಲು ಲಂಚದ ಬೇಡಿಕೆ ಇಟ್ಟರೆ ನಮಗೆ ಮಾಹಿತಿ ನೀಡಿ ಎಂದು ತಿಳಿಸಿದರು.



ಲೋಕಾಯುಕ್ತ ಪೊಲೀಸ್ ಇನ್ಸ್ಪೆಕ್ಟರ್ ಶೈಲಜಾ ಪ್ಯಾಟಿ ಶೆಟ್ಟರ್ ಮಾತನಾಡಿ, ಎಲ್ಲ ಸರಕಾರಿ ನೌಕರರು ಸಾರ್ವಜನಿಕರ ಕೆಲಸ ವನ್ನು ಪ್ರಾಮಾಣಿಕವಾಗಿ ಮಾಡಬೇಕು. ಸಾರ್ವಜನಿಕರ ಹತ್ತಿರ, ರೈತರ ಹತ್ತಿರ ಲಂಚ ತಗೊಳ್ಳಬಾರದು. ಇದರಿಂದ ದೇಶದ ಅಭಿವೃದ್ಧಿಗೆ ತೆ-ೂಡಕು ಉಂಟಾಗುತ್ತದೆ. ಎಲ್ಲ ಸಾರ್ವಜನಿಕರ ಸಹಕಾರದಿಂದ ಭ್ರಷ್ಟಚಾರವನ್ನು ತಡೆಗಟ್ಟಬಹುದು ಎಂದು ಹೇಳಿದರು.

ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ಮಾತನಾಡಿ ನಾವು ಭ್ರಷ್ಟಚಾರದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಇದು ಪ್ರಾಚಿನ ಕಾಲದಿಂದಲೂ ಇದೆ ವಿದ್ಯಾರ್ಥಿಗಳು ಕಾನೂನುಗಳ ಬಗ್ಗೆ ತಿಳಿದುಕೊಳ್ಳಬೇಕು ಅವುಗಳನ್ನು ಪಾಲನೆ ಮಾಡಬೇಕು ಪ್ರತಿಯೊಬ್ಬರು ಕಾನೂನುಗಳನ್ನು ಉಲ್ಲಂಘನೆ ಮಾಡಬಾರದು ಎಂದು ಹೆಳಿದರು.

ಈ ಸಂದರ್ಭದಲ್ಲಿ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥೆ ಡಾ. ಹುಲಿಗೆಮ್ಮ ಬಿ, ಉಪನ್ಯಾಸಕ ಡಾ. ಪ್ರದೀಪ್ ಕುಮಾರ್, ಡಾ. ನರಸಿಂಹ, ಅತಿಥಿ ಉಪನ್ಯಾಸಕರಾದ ಶಿವ ಪ್ರಸಾದ್ ಹಾದಿಮನಿ, ಡಾ. ಮಂಜಪ್ಪ, ಡಾ ಸೂರಪ್ಪ ಹಾಗೂ ವಿದ್ಯಾರ್ಥಿನಿಯರು ಇದ್ದರು.

# ಮಾದಕ ವಸ್ತುಗಳು ಯುವ ಜನಾಂಗಕ್ಕೆ ಮಾರಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾದಕ ವಸ್ತುಗಳು ಯುವ ಜನಾಂಗಕ್ಕೆ ಮಾರಕವಾಗಿ ಪರಿಣಮಿಸಿದ್ದು, ಆ ದುಶ್ಚಟದಿಂದ ದೂರವಾದರೆ ಮಾತ್ರ ಸದೃಢ ಸಮಾಜ ನಿರ್ಮಿಸಲು ಸಾಧ್ಯ ಎಂದು ಜೆ.ಟಿ.ಮಹಾವಿದ್ಯಾಲಯ ಪ್ರಾಚಾರ್ಯ ಪಿ.ಜಿ. ಪಾಟೀಲ್ ಹೇಳಿದರು.

ಅವರು ಕೆ.ಎಲ್.ಇ. ಸಂಸ್ಥೆಯ ಜೆ. ಟಿ. ಮಹಾವಿದ್ಯಾಲಯದಲ್ಲಿ ರೆಡ್ ಕ್ರಾಸ್ ಘಟಕ, ನೆಹರು ಯುವ ಕೇಂದ್ರ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಗದಗ ಇವರ ಸಹಯೋಗದಲ್ಲಿ ಏರ್ಪಡಿಸಿದ್ದ ಮಾದಕ ವಸ್ತು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ನಡೆದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಗೋಪಾಲ ಸುರಪುರ ಮಾತನಾಡಿ, ಮಾದಕ ವಸ್ತುಗಳ ಬಳಕೆಯಿಂದ ಆರೋಗ್ಯದ ಮೇಲೆ ಏನೆಲ್ಲಾ ಪರಿಣಾಮಗಳಾಗುತ್ತವೆ ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ನೀಡಿದರು.


ಜಿಲ್ಲಾ ಯುವ ಸಮನ್ವಯ ಅಧಿಕಾರಿಗಳಾದ ಶ್ರೀಮತಿ. ಎಸ್.ರಂಜನ್ ಮಾತನಾಡಿ, ಯುವ ಶಕ್ತಿ ಈ ದೇಶದ ಬಹು ದೊಡ್ಡ ಆಸ್ತಿ. ಆ ಅಸ್ತಿಯನ್ನು ಜೋಪಾನದಿಂದ ಕಾಪಾಡಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಯುವ ರೆಡ್ ಕ್ರಾಸ್ ಘಟಕದ ಸಂಚಾಲಕರಾದ ಡಾ. ನಾಗರಾಜ ಓಬಯ್ಯ ಸ್ವಾಗತಿಸಿದರು. ಕುಮಾರಿ ಗೀತಾ ವಂದಿಸಿದರು ಹಾಗೂ ಸುಸ್ಮಿತಾ ಪೂಜಾರ್ ಪ್ರಾರ್ಥಿಸಿದರು. ರವಿ ಪೂಜಾರ ಕಾರ್ಯಕ್ರಮ ನಿರೂಪಿಸಿದರು.

# ಸುಭಾಷ್ ಅಗಲಿಕೆಗೆ ರಂಭಾಪುರಿ ಶ್ರೀ ಸಂತಾಪ

**■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ**

ವೀರಶೈವ ಕಲ್ಯಾಣ ಮಂದಿರದ ಅಧ್ಯಕ್ಷರು, ಮಾಜಿ ನಗರಸಭಾಧ್ಯಕ್ಷರಾಗಿದ್ದ ಶಿವಮೊಗ್ಗದ ಎನ್.ಜೆ. ರಾಜಶೇಖರ (ಸುಭಾಷ್) ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದರು.



ಅವರು ಸೋಮವಾರ ನಗರದ ರಾಜಶೇಖರ್ ಅವರ ನಿವಾಸಕ್ಕೆ ಭೇಟಿ ನೀಡಿ ಮೃತರ ಪಾರ್ಥಿವ ಶರೀರಕ್ಕೆ ಪುಷ್ಪಗುಚ್ಛವಿರಿಸಿ ಕುಟುಂಬ ವರ್ಗದವರಿಗೆ ಸಾಂತ್ವನ ಹೇಳಿದರು.

ವೀರಶೈವ ಸಮಾಜದ ಮುಖಂಡರಾಗಿದ್ದ ಸುಭಾಷ್ ಅವರು ರಾಜಕೀಯ ಸಾಮಾಜಿಕ ಮತ್ತು ಧರ್ಮ ಕಾರ್ಯಗಳಲ್ಲಿ ಸದಾ ಸಕ್ರಿಯರಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಬಸವೇಶ್ವರ ಸೇವಾ ಸಮಾಜದ ಅಧ್ಯಕ್ಷರಾಗಿಯೂ ಕಾರ್ಯ ನಿರ್ವಹಿಸಿದ ಅವರು ನಾಲ್ಕು ಬಾರಿ ನಗರಸಭಾ ಸದಸ್ಯರಾಗಿ ಒಂದು ಬಾರಿ ನಗರಸಭಾಧ್ಯಕ್ಷರಾಗಿ ಜನಹಿತ ಕಾರ್ಯಗಳನ್ನು ಮಾಡಿದ್ದಾರೆ.

ನಗರದಲ್ಲಿ ಈ ಹಿಂದೆ ನಡೆದ ಶ್ರೀ ಜಗದ್ಗುರು ಪಂಚಾಚಾರ್ಯರ ಉತ್ಸವ, ಶ್ರೀ ರಂಭಾಪುರಿ ಜಗದ್ಗುರುಗಳ ದಸರಾ ಧರ್ಮ ಸಮ್ಮೇಳನಗಳಲ್ಲಿ ಅವರು ಉತ್ಸಾಹದಿಂದ ಕೆಲಸ ಮಾಡಿದ್ದನ್ನು ಮರೆಯುವಂತಿಲ್ಲ. ಶ್ರೀ ಜಗದ್ಗುರು ರಂಭಾಪುರಿ ಪೀಠದ ಜೊತೆಗೆ ಬಹಳ ಹತ್ತಿರದ ಸಂಬಂಧ ಹೊಂದಿದ್ದ ಅವರ ಅಗಲಿಕೆ ನೋವನ್ನುಂಟು ಮಾಡಿದೆ. ಪರಮಾತ್ಮನು ಅವರ ಪವಿತ್ರ ಆತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟಂಬ ವರ್ಗದವರಿಗೆ ನೀಡಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಿಳಿಸಿದರು. ಎಡೆಯೂರು, ಬಿಳಿಕಿ, ಮಳಲಿ, ತಾವರೆಕೆರೆ, ಹಾರನಹಳ್ಳಿ ಇನ್ನುಳಿದ ಮಠಾಧೀಶರು ಇದ್ದರು.

# ಸೌಂದರ್ಯ ಲಹರಿ ಸಂಘದಿಂದ ಸನ್ಮಾನ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಸೌಂದರ್ಯ ಲಹರಿ ಬಳಗದ ವತಿಯಿಂದ ಶಂಕರಾಚಾರ್ಯರ ವಿರಚಿತ ಕಲ್ಯಾಣ ದೃಷ್ಟಿಸ್ತವ, ಶಿವಪಂಚಾಕ್ಷರ ಮತ್ತು ಲಕ್ಷ್ಮೀನರಸಿಂಹ ಸ್ತೋತ್ರ ಪಾರಾಯಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಇದೇ ಸಂದರ್ಭದಲ್ಲಿ ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ಗೆ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ತಾತಾನಗೌಡ ಪಾಟೀಲ, ಉಪಾಧ್ಯಕ್ಷ ರಾಜಣ್ಣ ಎಸ್.ಗುಡಿಮನಿ, ಕಾರ್ಯದರ್ಶಿ ಅಶೋಕ ಪಾಟೀಲ, ಸೋಮಣ್ಣ ಜಾರಿ, ತೆರಿಗೆ ಸಲಹೆಗಾರ ಸಂಘಕ್ಕೆ ಅಧ್ಯಕ್ಷರಾಗಿ ಆಯ್ಕೆಯಾದ ಸಿದ್ದನಗೌಡ ಕಲ್ಲನಗೌಡರ, ಸಾಧಕರಾದ



ಲಿಂಗರಾಜ ಆಮಾತ್ಯ, ಪ್ರಕಾಶ ಅಕ್ಕಿ, ಬಸವರಾಜ ಕರಮುಡಿ, ಹೇಮಾದ್ರಿ ಇವರನ್ನು ಸನ್ಮಾನಿಸಲಾಯಿತು.

ಸೌಂದರ್ಯ ಲಹರಿ ಬಳಗದ ಅಧ್ಯಕ್ಷೆ ರೇಣುಕಾ ಆಮಾತ್ಯ, ಉಪಾಧ್ಯಕ್ಷ ರಾಜು ಗುಡಿಮನಿ ಸನ್ಮಾನ ಸ್ವೀಕರಿಸಿದ ತಾತಾನಗೌಡ ಪಾಟೀಲ ಮಾತನಾಡಿದರು.

ಕಾರ್ಯಕ್ರಮದಲ್ಲಿ ಲಲಿತಾ ಭರಮಗೌಡ್ರ, ಶೋಭಾ ಕಲ್ಲನಗೌಡ್ರ, ಗೀತಾ, ವಿದ್ಯಾ, ಲಾವಣ್ಯಾ, ಯಶೋಧಾ, ಶಾರದಾ, ಶೋಭಾ, ಪವಿತ್ರ, ವಿಜ್ಜು, ಸುಜಾತಾ, ಸುವರ್ಣ ಮದರಿಮಠ, ಜ್ಯೋತಿ ದಾನಪ್ಪಗೌಡ್ರ, ಜಯಶ್ರೀ ಉಗಲಾಟದ, ಸುನಂದಾ, ರಾಜಕ್ಕ ಶೆಟ್ಟರ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಸ್ವ-ರಚಿತ ಕವನಗಳನ್ನು ಓದಿದರು. ಶಿವಲೀಲಾ ಅಕ್ಕಿ ನಿರೂಪಿಸಿದರು. ಜಯಶ್ರೀ ಪಾಟೀಲ ವಂದಿಸಿದರು.

### ಬಸವದಳದ 1616ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ಪ್ರಾ. ಶಿವನಗೌಡರ

# ತೋಂಟದ ಶ್ರೀಗಳು ಮನುಕುಲದ ಬೆಳಕು

■ವಿಜಯಸಾಕ್ಷಿ ಸುದ್ದಿ, ಗದಗ

ಮಠ ಪರಂಪರೆಯಲ್ಲಿ ತೋಂಟದ ಶ್ರೀಗಳ ಬದುಕು ಸಮಾಜಮುಖಿ ಹೋರಾಟದ ಬದುಕಾಗಿತ್ತು. ತೋಂಟದಾರ್ಯ ಪೀಠಕ್ಕೆ ಪೀಠಾಧಿಪತಿಗಳಾದ ನಂತರ ಅವರು ಗೈದ ಕಾರ್ಯ ಅಗಾಧವಾದುದು. ಶರಣ ಸಂಪ್ರದಾಯದಂತೆ ಎಲ್ಲರೂ ಸಮಾನರು, 'ಇವನಮ್ಮವ ಇವನಮ್ಮವ' ಎಂಬ ಬಸವೇಶ್ವರ ವಚನದಂತೆ ಹಾಗೂ ಕಾಯಕವೇ ಕೈಲಾಸ ತತ್ವದಡಿ ಮಠವನ್ನು ಕಟ್ಟುವುದು ಪೂಜ್ಯರ ಸಂಕಲ್ಪವಾಗಿತ್ತು ಎಂದು ನಗರದ ಬಸವೇಶ್ವರ ಹೈಸ್ಕೂಲ್‌ನ ನಿವೃತ್ತ ಪ್ರಾಚಾರ್ಯ ಹಾಗೂ ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯ ಕಾರ್ಯದರ್ಶಿಗಳೂ ಆದ ಶಿವನಗೌಡ ಗೌಡರ ಅಭಿಪ್ರಾಯಪಟ್ಟರು.

ಅವರು ಬಸವದಳದ 1616ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ 'ಪೂಜ್ಯಶ್ರೀ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 6ನೇ ಸ್ಮರಣೆ' ಕಾರ್ಯಕ್ರಮದಲ್ಲಿ ಪೂಜ್ಯರ ಬಗ್ಗೆ ಉಪನ್ಯಾಸ ನೀಡಿ ಮಾತನಾಡಿ, ತೋಂಟದ ಸಿದ್ಧಲಿಂಗ ಶ್ರೀಗಳ ಬದುಕೇ ಅನನ್ಯವಾದುದು. ಶ್ರೀಮಠದ ಪೀಠಾಧಿಪತಿಗಳಾಗಿ ಸುಮಾರು ನಾಲ್ಕುವರೆ ದಶಕಗಳ ಅವಧಿಯಲ್ಲಿ ಸಮರೋಪಾದಿಯಲ್ಲಿ ಬಸವತತ್ವ ಪ್ರಚಾರದಲ್ಲಿ ಮಹಾದಂಡನಾಯಕರಂತೆ ಕೆಲಸ ಮಾಡಿದರು. ಈ ಮೂಲಕ ಜನರನ್ನು ಜಾಗೃತಿಗೊಳಿಸಿದರೆಂದರು.




ಅಂದು ಲಿಂಗಾಯತ ಸಮಾಜದಲ್ಲಿ ಅಜ್ಞಾನ-ಮೂಢನಂಬಿಕೆ ತೊಲಗಿಸಿದರು. ಜೊತೆಗೆ ಶ್ರೀಮಠದಿಂದ ನೂರಾರು ಶಿಕ್ಷಣ ಸಂಸ್ಥೆಗಳು, ತಾಂತ್ರಿಕ ಕಾಲೇಜುಗಳನ್ನು ತೆರೆದು ಬಡ ಹಾಗೂ ಗ್ರಾಮೀಣ ಮಕ್ಕಳಿಗೆ ಶಿಕ್ಷಣ ದೊರೆವಂತೆ ಮಾಡಿದರು. ಹಾಗೆಯೇ ಲಿಂಗಾಯತ ಸ್ವತಂತ್ರ ಧರ್ಮ ಸ್ಥಾಪನೆಗೆ ಹೋರಾಟದ ನೇತೃತ್ವ ವಹಿಸಿ ಆ ಮೂಲಕ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಧರ್ಮ ಮಾನ್ಯತೆಗೆ ಶಿಫಾರಸಿಗೆ ಕಳುಹಿಸುವಲ್ಲಿ ಯಶಸ್ವಿಯಾದರೆಂದರು.

ಆಧುನಿಕ ಕೃಷಿ ಪದ್ಧತಿಯನ್ನು ಜಾರಿಗೆ ತಂದರು. ಗ್ರಾಮೀಣ ರೈತರಿಗೆ ಅನುಕೂಲ ಮಾಡಿಕೊಟ್ಟರು. ಜೊತೆಗೆ ಲಿಂಗಾಯತ ಅಧ್ಯಯನ ಸಂಸ್ಥೆ ಸ್ಥಾಪಿಸಿ ಸುಮಾರು 950ಕ್ಕೂ ಹೆಚ್ಚು ಮಹತ್ವಪೂರ್ಣ ಕೃತಿಗಳನ್ನು ಪ್ರಕಟಿಸಿದ ಕೀರ್ತಿ ಪೂಜ್ಯರಿಗೆ ಸಲ್ಲುತ್ತದೆ. ಆರೀಗಳ ಕನಸಿನ ಕೂಸಾದ ಶಿವಾನುಭವ ಕಾರ್ಯಕ್ರಮದ ಮೂಲಕ 2 ಸಾವಿರ ಕಾರ್ಯಕ್ರಮಗಳನ್ನು ನಡೆಸಿ ಜನತೆಯಲ್ಲಿ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಜಾಗೃತಿಗೆ ಕಾರಣೀಕರ್ತರಾದರು ಎಂದರು.

ನಂತರ 'ಶರಣೆ ಉರಿಲಿಂಗ ಪೆದ್ದಿಗಳ ಪುಣ್ಯಸ್ತ್ರೀ ಕಾಳವ್ವೆಯವರು' ಎರಡು ವಚನಗಳ ಚಿಂತನೆಯನ್ನು ರೇಣುಕಾ ಕರಿಗೌಡರ ನಡೆಸಿಕೊಟ್ಟರು. ಇದೇ ವಚನಗಳ ಕುರಿತು ಶ್ರೀಮತಿ ಧರ್ಮರೆಡ್ಡಿಯವರು ಮಾತನಾಡಿದರು.

ನೀಲಮ್ಮ ಎಂ.ಭಾವಿಯವರು ವಚನ ಪ್ರಾರ್ಥನೆಗೈದರು. ಶರಣಪ್ಪ ಎಸ್.ಅಂಗಡಿ ಸ್ವಾಗತಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ವಿ.ಕೆ. ಕರಿಗೌಡರ ವಹಿಸಿದ್ದರು. ಪ್ರಕಾಶ ಅಸುಂಡಿ ಶರಣು ಸಮರ್ಪಣೆಗೈದರು. ಪ್ರಸಾದ ಸೇವೆಯನ್ನು ಮೃತ್ಯುಂಜಯ ಜಿನಗಾ ವಹಿಸಿದ್ದರು.

ಕನ್ನಡ ನಾಡು-ನುಡಿಯ ಉಳಿವಿಗಾಗಿ ಅವರು ಈ ಹಿಂದೆಯೇ ಗೋಕಾಕ ಹೋರಾಟದ ಮುಂಚೂಣಿಯಲ್ಲಿದ್ದರು. ಜೊತೆಗೆ ನಂಜುಂಡಪ್ಪ ವರದಿ, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ, ಪೋಸ್ಕೋ ಚಳುವಳಿಯ ಮೂಲಕ ಕಪ್ಪತ್ತಗುಡ್ಡ ಉಳಿಕೆ ಹೋರಾಟದ ನಡೆಸಿದ್ದು ಐತಿಹಾಸಿಕವಾಗಿದೆ. ಮಠಾಧೀಶ್ವರರೊಬ್ಬರು ಕರುನಾಡಿನ ಇತಿಹಾಸದಲ್ಲಿ ಇಷ್ಟೊಂದು ಮಹತ್ತರ ಕಾರ್ಯಗೈದುದು ಇದೇ ಪ್ರಥವಾಗಿದೆ. ಈ ರೀತಿ ಇತರ ಮಠಾಧೀಶರಿಗೆ ಮಾದರಿಯಾಗಿ ಅಹರ್ನಿಶಿ ಕಾರ್ಯಗೈದರು. ತೋಂಟದ ಸಿದ್ಧಲಿಂಗ ಶ್ರೀಗಳ ಬದುಕು ವಿಸ್ಮಯ, ಅದ್ಭುತವಾದುದು ಎಂದು ಪ್ರಾ. ಶಿವನಗೌಡ ಗೌಡರ ತಿಳಿಸಿದರು.

## ಅನನ್ಯ ವಿದ್ಯಾದೇಗುಲ, ಆಚಾರ್ಯಶ್ರೀ ಪ್ರಶಸ್ತಿಗೆ ಉಪನ್ಯಾಸಕಿ ರಶ್ಮೀ ಅಂಟೂರಮಠ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಹೈ.ಕ.ಶಿ ಸಂಸ್ತೆಯ, ಶ್ರೀಮತಿ ವೀರಮ್ಮ ಗಂಗಸಿರಿ ಪದವಿ ಪೂರ್ವ ಮಹಿಳಾ ಮಹಾವಿದ್ಯಾಲದ ವಾಣಿಜ್ಯ ವಿಭಾಗದ ಉಪನ್ಯಾಸಕರಾದ ರಶ್ಮೀ ಅಂಟೂರಮಠ ಅವರಿಗೆ ಬಸವ ಪರಿಷತ್ ಬೆಂಗಳೂರು ವತಿಯಿಂದ ಉತ್ಕೃಷ್ಟ ಶಿಕ್ಷಣ ಸಂಸ್ಥೆ ಹಾಗೂ ಅತ್ಯುತ್ತಮ ಸಾಧನೆಗೈದ ಬೋಧಕರನ್ನು ಗುರುತಿಸಿ ಗೌರವಿಸುವ ಅನನ್ಯ ವಿದ್ಯಾದೇಗುಲ ಹಾಗೂ ಆಚಾರ್ಯಶ್ರೀ ಪ್ರಶಸ್ತಿ ಲಭಿಸಿದೆ. ದಿನಾಂಕ 26.10.2024 ರಂದು ಬೆಂಗಳೂರಿನ ಕೊಂಡಜ್ಜಿ ಬಸಪ್ಪ ಸಭಾಂಗಣ ಸ್ಕೌಟ್ ಮತ್ತು ಗೈಡ್ಸ್ ಸಂಸ್ಥೆ ಪ್ರಾಂಗಣ, ಅರಮನೆ ರಸ್ತೆಯಲ್ಲಿ ಆಯೋಜಿಸಲಾದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಗದಗ ಮೂಲದವರಾದ ರಶ್ಮೀ ಅಂಟೂರಮಠ ಅವರು ಪ್ರಶಸ್ತಿಯನ್ನು ಪಡೆದುಕೊಂಡಿದ್ದಾರೆ. ರಶ್ಮೀ ಅಂಟೂರಮಠ ಇವರು ಗದುಗಿನ ಬರಹಗಾರರಾದ ಈ ಕ ಲಕ್ಕೇಶ್ವರಮಠ ಅವರ ಸುಪುತ್ರಿಯಾಗಿದ್ದಾರೆ.

# ಉತ್ತಮ ಉದ್ಯೋಗದ ಗುರಿ ಹೊಂದಿ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಇಂದಿನ ಯುವಕರು ಉತ್ತಮವಾದ ತರಬೇತಿ ಪಡೆದು, ಉತ್ತಮವಾದ ಉದ್ಯೋಗವನ್ನು ಪಡೆಯುವ ಗುರಿಯನ್ನು ಹೊಂದಬೇಕೆಂದು ಶ್ರೀ ರಂಭಾಪುರಿ ಪೀಠದ ಲೆಕ್ಕಾಧಿಕಾರಿ ಸಂಕಪ್ಪರವರ ತಿಳಿಸಿದರು.

ಅವರು ಬಾಳೆಹೊನ್ನೂರಿನ ರೇಣುಕ ನಗರದಲ್ಲಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ಕೈಗಾರಿಕಾ ತರಬೇತಿ ಸಂಸ್ಥೆಯ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡುತ್ತಿದ್ದರು.

ಸ್ವಾತಂತ್ರ್ಯ ಹೋರಾಟಗಾರರಾದ ಸುಭಾಷ್ ಚಂದ್ರಬೋಸ್ ಹಾಗೂ ಭಗತ್‌ಸಿಂಗ್‌ರವರ ಬಲಿಷ್ಠ ಭಾರತದ ಕನಸು ನನಸಾಗಬೇಕಾದರೆ ಯುವ ಜನಾಂಗ ದೇಶಭಕ್ತಿಯನ್ನು ಬೆಳೆಸಿಕೊಂಡು ಉದ್ಯೋಗಸ್ಥರಾಗಬೇಕು ಎಂದರು.

ಬಾಳೆಹೊನ್ನೂರು ವರ್ತಕರ ಸಂಘದ ಅಧ್ಯಕ್ಷ ಮನುಕುಮಾರ್ ಕಲ್ಲೇಶ್ವರ ಮಾತನಾಡಿ, ಐಟಿಐ ತರಬೇತಿ ಪಡೆದ ಯುವಕ ಮತ್ತು ಯುವತಿಯರಿಗೆ ಬಹಳ ಉದ್ಯೋಗಾವಕಾಶಗಳಿವೆ. ಈ ಸಂಸ್ಥೆಯಲ್ಲಿ ತರಬೇತಿ ಪಡೆದ ಯುವಕರು ತುಂಬಾ ದೊಡ್ಡ ಕಂಪನಿಗಳಲ್ಲಿ ಕೆಲಸಕ್ಕೆ ಸೇರಿ ಬಾಳೆಹೊನ್ನೂರಿಗೆ ಕೀರ್ತಿ ತಂದಿರುವುದು ಹೆಮ್ಮೆಯ ವಿಷಯ ಎಂದರು.

ಇದೇ ಸಂದರ್ಭದಲ್ಲಿ ಆಗಸ್ಟ್ 2024 ರಲ್ಲಿ ಜರುಗಿದ ಅಖಿಲ ಭಾರತ ವೃತ್ತಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ತರಬೇತಿದಾರರಿಗೆ ರಾಷ್ಟ್ರೀಯ ವೃತ್ತಿ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಸಂಸ್ಥೆಯ ಪ್ರಾಚಾರ್ಯ ಆನಂದ ಹೆಚ್.ಆರ್ ಮಾತನಾಡಿ, ನಮ್ಮ ಸಂಸ್ಥೆಗೆ ಪ್ರಸ್ತುತ ಸಾಲಿನಲ್ಲಿ ಶೇ.88 ರಷ್ಟು ಫಲಿತಾಂಶ ಬಂದಿದ್ದು, ಎಲೆಕ್ಟ್ರೀಶಿಯನ್ ವಿಭಾಗದ ವಿದ್ಯಾರ್ಥಿ ಲಕ್ಷ್ಮೀಶ ವಿ.ಭಟ್ ಶೇ. 90ರಷ್ಟು ಅಂಕಗಳನ್ನು ಪಡೆದು ಸಂಸ್ಥೆಗೆ ಕೀರ್ತಿ ತಂದಿದ್ದಾರೆ ಎಂದರು.

ಮುಖ್ಯ ಅತಿಥಿಗಳು ತರಬೇತಿದಾರರಿಗೆ ರಾಷ್ಟ್ರೀಯ ವೃತ್ತಿ ಪ್ರಮಾಣಪತ್ರಗಳನ್ನು ವಿತರಿಸಿದರು. ಪ್ರತಿಭಾವಂತ ತರಬೇತಿದಾರ ಲಕ್ಷ್ಮೀಶ ವಿ.ಭಟ್. ಇವರನ್ನು ಸನ್ಮಾನಿಸಲಾಯಿತು.

ಶಿಕ್ಷಕ ಅಶೋಕ್ ಸ್ವಾಗತಿಸಿದರೆ, ತರಬೇತಿದಾರ ಪ್ರತೀಕ್ ಕಿಣಿ ಪ್ರಾರ್ಥಿಸಿದರು. ಶಿಕ್ಷಕ ಚಂದ್ರಶೇಖರ್ ನಿರೂಪಿಸಿ ವಂದಿಸಿದರು. ಸಿಬ್ಬಂದಿಗಳಾದ ಶ್ರೀನಿವಾಸ್, ರವಿರಾಜು, ಮಲ್ಲಿಕಾರ್ಜುನ, ಉಮೇಶ್, ಪ್ರಕಾಶ್ ಇನ್ನಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬೆಳೆ ಹಾನಿ ಪರಿಹಾರ ನೀಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನಲ್ಲಿ ಅಕ್ಟೋಬರ್ ತಿಂಗಳಲ್ಲಿ ಸುರಿದ ಅತಿಯಾದ ಮಳೆಗೆ ಬೆಳೆಗಳು ಹಾಳಾಗಿದ್ದರಿಂದ ಸರ್ಕಾರ ಫಸಲ್ ಭಿಮಾ ಯೋಜನೆ ಅಡಿಯಲ್ಲಿ ರೈತರಿಗೆ ಮಧ್ಯಂತರ ಪರಿಹಾರವಾಗಿ ಶೆ. 25ರಷ್ಟು ಹಣವನ್ನು ಶೀಘ್ರವೇ ಬಿಡುಗಡೆ ಮಾಡಬೇಕು ಎಂದು ರಾಜ್ಯ ರೈತ ಸಂಘದ ವತಿಯಿಂದ ತಹಸೀಲ್ದಾರ್ ವಾಸುದೇವ ಸ್ವಾಮಿ ಅವರಿಗೆ ರೈತರು ಮನವಿ ಸಲ್ಲಿಸಿದರು.

ತಾಲೂಕು ಅಧ್ಯಕ್ಷ ಚಂದ್ರು ಕಳ್ಳಿಹಾಳ ಮಾತನಾಡಿ, ಲಕ್ಷ್ಮೇಶ್ವರ ತಾಲೂಕಿನಲ್ಲಿ ಇತ್ತೀಚೆಗೆ ಸುರಿದ ಅತಿಯಾದ ಮಳೆಗೆ ಮುಂಗಾರು ಹಂಗಾಮಿನ ಬೆಳೆಗಳು ಕೊಳೆತು ಹೋಗಿವೆ. ಗೋವಿನ ಜೋಳ, ಬಿಟಿ ಹತ್ತಿ, ಈರುಳ್ಳಿ, ಮೆಣಸಿನಕಾಯಿ, ಶೇಂಗಾ ಬೆಳೆಗಳು ನಾಶವಾಗಿವೆ. ಇದರಿಂದ ರೈತರು ಸಾಕಷ್ಟು ತೆ-ೊಂದರೆ ಅನುಭವಿಸುವಂತಾಗಿದೆ. ಅದ್ದರಿಂದ ಸರ್ಕಾರ ಫಸಲ್ ಭೀಮಾ ಯೋಜನೆ ಅಡಿಯಲ್ಲಿ ರೈತರು ಬೆಳೆ ವಿಮೆ ಹಣವನ್ನು ಬಿಡುಗಡೆ ಮಾಡಿ ರೈತರು ಸಂಕಷ್ಟ ದೂರ ಮಾಡಬೇಕು ಎಂದು ಆಗ್ರಹಿಸಿದರು.

ತಹಸೀಲ್ದಾರ್ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿ ಮಾತನಾಡಿ, ಸರ್ಕಾರಕ್ಕೆ ನಿಮ್ಮ ಅಹವಾಲು ಕಳಿಸಿಕೊಡುತ್ತೇವೆ. ಸರ್ಕಾರದ ನಿರ್ದೇಶನದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹನಮಂತ ಹುಚ್ಚಣ್ಣವರ, ರಮೇಶ ದೊಡ್ಡಮನಿ, ಚಂದ್ರು ಶಿರನಹಳ್ಳಿ, ಶಂಬಣ್ಣ ಬಳಿಗಾರ, ಬಸವರಾಜ ಮೂಲಿಮನಿ, ರವಿ ಲಮಾಣಿ, ದೇವಪ್ಪ ರಾಹುಲ್, ದೇವಪ್ಪ ದಾಸಣ್ಣವರ ಸೇರಿ ಹಲವರಿದ್ದರು.

# ಎನ್‌ಎಸ್‌ಎಸ್ ಶಿಬಿರಗಳಿಂದ ಭಾವೈಕ್ಯತೆ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಕಾಲೇಜು ವಿದ್ಯಾರ್ಥಿಗಳಲ್ಲಿ ರಾಷ್ಟ್ರೀಯ ಭಾವೈಕ್ಯತೆ ಮೂಡಿಸುವಲ್ಲಿ ಎನ್‌ಎಸ್‌ಎಸ್ ಶಿಬಿರಗಳು ಸಹಕಾರಿಯಾಗುತ್ತದೆ ಎಂದು ಶ್ರೀ ಅನ್ನದಾನೇಶ್ವರ ಪಪೂ ಮಹಾವಿದ್ಯಾಲಯದ ಪ್ರಾಂಶುಪಾಲ ವೈ.ಸಿ. ಪಾಟೀಲ ಹೇಳಿದರು.

ಅವರು ಸಮೀಪದ ನಿಡಗುಂದಿ ಕೊಪ್ಪ ಶಾಖಾ ಶಿವಯೋಗಮಂದಿರ ಶ್ರೀಮಠದಲ್ಲಿ ನರೇಗಲ್ಲ ಎಸ್.ಎ. ಪ.ಪೂ ಮಹಾವಿದ್ಯಾಲಯವು ಆಯೋಜಿಸಿದ್ದ ರಾಷ್ಟ್ರೀಯ ಸೇವಾ ಯೋಜನೆ ಘಟಕದ 2024-25ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ಶಿಬಿರಗಳನ್ನು ಗ್ರಾಮಗಳಲ್ಲಿ ಆಯೋಜಿಸುವುದರಿಂದ ಗ್ರಾಮದ ಜನರ ಬದುಕನ್ನು ಸುಧಾರಿಸುವುದು. ಪರಿಸರ ಪ್ರಜ್ಞೆ, ನಾಗರಿಕ ಪ್ರಜ್ಞೆ, ಸ್ವಚ್ಛತೆ, ಶಿಕ್ಷಣ, ಆರೋಗ್ಯ, ರಾಷ್ಟ್ರೀಯ ಏಕತೆ, ವಿಭಿನ್ನ ಸಂಸ್ಕೃತಿಯ ಪರಿಚಯ, ಎಲ್ಲರನ್ನು ಪ್ರೀತಿ ಗೌರವದಿಂದ ಕಾಣುವುದು ಮುಂತಾದ ವಿಷಯಗಳ ಕುರಿತು ಮಾಹಿತಿ ಮೂಡಿಸುವುದು, ಜಾಗೃತ ಗೊಳಿಸುವುದು. ವಿದ್ಯಾರ್ಥಿಗಳಿಗೆ ಗ್ರಾಮದ ಬದುಕನ್ನು ಪರಿಚಯಿಸುವುದು. ಅವರ ಸಂಸ್ಕೃತಿ, ಶ್ರಮದ ಮಹತ್ವ ಆಚಾರ ವಿಚಾರಗಳನ್ನು ತಿಳಿಸುವುದು. ವಿದ್ಯಾರ್ಥಿಗಳ ಪ್ರತಿಭೆ ಪ್ರದರ್ಶನಗೊಳ್ಳುವುದು ಈ ಶಿಬಿರದಿಂದ ಇವೆಲ್ಲವನ್ನು ಕಲಿತುಕೊಂಡಿದ್ದು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಇನ್ನೋರ್ವ ಅತಿಥಿ ಉಪನ್ಯಾಸಕ ಎಫ್.ಎನ್. ಹುಡೇದ ಮಾತನಾಡಿ, ಮಹಾತ್ಮ ಗಾಂಧೀಜಿಯವರ ಕಲ್ಪನೆಯಿಂದ ಹುಟ್ಟಿಕೊಂಡ ಎನ್.ಎಸ್.ಎಸ್ ಶಿಬಿರಗಳು ಮನಸ್ಸುಗಳನ್ನು ಪರಿವರ್ತಿಸುತ್ತವೆ. ವಿದ್ಯಾರ್ಥಿಗಳು ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸಬೇಕು. ರಾಷ್ಟ್ರೀಯ ಸೇವಾ ಯೋಜನೆ ವ್ಯಕ್ತಿಯ ವ್ಯಕ್ತಿತ್ವವನ್ನು ರೂಪಿಸುವುದರ ಜೊತೆಗೆ ಬದುಕು ಯಾವ ರೀತಿ ಇರಬೇಕೆಂದು ತಿಳಿಸಿಕೊಡುತ್ತದೆ. ಶಿಬಿರದಿಂದ ಪಡೆದ ಅನುಭವ ಜ್ಞಾನ ಸಾಧನೆಯೆಡೆಗೆ ಸ್ಫೂರ್ತಿಯಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮಾಧಿಕಾರಿ ಡಿ.ಎಂ. ನಾಗರೇಶಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಎ.ವ್ಹಿ.ವ್ಹಿ.ಪಿ ಸಮಿತಿಯ ಆಡಳಿತಾಧಿಕಾರಿ ಎನ್. ಆರ್. ಗೌಡರ ಅಧ್ಯಕ್ಷತೆ ವಹಿಸಿದ್ದರು. ಸುರೇಶ ಸರ್ವಿ, ಭರಮಗೌಡ್ರ ಮಾಸ್ತಿ, ಬಸವರಾಜ ಬನ್ನಿಗೋಳ ಉಪಸ್ಥಿತರಿದ್ದರು.

# ನೈತಿಕ ರಾಜಕಾರಣ ದೂರವಾಗುತ್ತಿದೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ರಾಜಕೀಯ ಪಕ್ಷಗಳು ತತ್ವ ಸಿದ್ಧಾಂತವನ್ನು ಸಂಪೂರ್ಣವಾಗಿ ಮರೆತುಬಿಟ್ಟಿವೆ. ರಾಜ್ಯಕೀಯದಲ್ಲಿ ನೈತಿಕತೆ ಮಾಯವಾಗುತ್ತಿದ್ದು, ಇದು ದೇಶದ ಭವಿಷ್ಯಕ್ಕೆ ಅತ್ಯಂತ ಅಪಾಯಕಾರಿ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಕರ್ನಾಟಕ ರಾಜ್ಯ ಅಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಕಳವಳ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇತ್ತೀಚಿನ ಬೆಳವಣಿಗೆಗಳನ್ನು ಗಮನಿಸಿದರೆ ಸಿದ್ಧಾಂತಗಳಿಗೆ ಯಾವುದೇ ಬೆಲೆ ಇಲ್ಲ ಎನ್ನಿಸುತ್ತಿದೆ. ಅಧಿಕಾರಕ್ಕಾಗಿ ಪಕ್ಷಾಂತರ ಪ್ರಕ್ರಿಯೆಯಲ್ಲಿ ಯಾವ ಪಕ್ಷವೂ ಕಡಿಮೆಯಿಲ್ಲ. ಆಪರೇಷನ್ ಕಮಲ, ಹಸ್ತ ಎಂಬ ಹೆಸರಲ್ಲಿ ನಡೆಯುವ ರಾಜಕೀಯ ಅನೈತಿಕತೆಗೂ ಇಲ್ಲಿ ಕೊರತೆಯಿಲ್ಲ. ಇತರ ಪಕ್ಷಗಳ ಕಡೆಗೆ ಬಹಿರಂಗವಾಗಿ ಬೆರಳು ತೋರಿಸುವಾಗ ತಮ್ಮೆಡೆಗೆ ಉಳಿದ ಬೆರಳು ತೋರುತ್ತಿರುವ ಬಗ್ಗೆ ಯಾರೂ ಚಿಂತಿಸುವುದಿಲ್ಲ.

ಪ್ರತಿಯೊಂದು ಪಕ್ಷಗಳಿಗೆ ಒಂದು ತತ್ವ ಸಿದ್ಧಾಂತವೆಂಬುದು ಇರುತ್ತದೆ. ಆದರೆ ಅದನ್ನು ಗಾಳಿಗೆ ತೂರಲಾಗುತ್ತಿದೆ. ಅಧಿಕಾರ, ಹಣದ ಮುಂದೆ ಯಾವ ತತ್ವ-ಸಿದ್ಧಾಂತವು ಗಣನೆಗೆ ಬರುವುದಿಲ್ಲ. ರಾಜಕೀಯ ಪಕ್ಷಗಳು ನೈತಿಕ ರಾಜಕಾರಣದಿಂದ ದೂರ ಸರಿಯುತ್ತಿರುವುದು ಪ್ರಜಾಪ್ರಭುತ್ವದ ದೃಷ್ಟಿಯಿಂದ ಅಪಾಯಕಾರಿಯಾಗಿದೆ. ಇದನ್ನು ತಡೆಗಟ್ಟಲು ಪ್ರಜ್ಞಾವಂತ ನಾಗರಿಕರು ಮುಂದೆ ಬರಬೇಕೆಂದು ಅವರು ಮನವಿ ಮಾಡಿದ್ದಾರೆ.



ಗದುಗಿನಲ್ಲಿ ಜರುಗಿದ ಕ್ರೀಡಾಕೂಟದಲ್ಲಿ ಮಾರನಬಸರಿ ಗ್ರಾಮದ ಸಹಿಪ್ರಾ ಉರ್ದು ಶಾಲೆಯ ವಿದ್ಯಾರ್ಥಿನಿ ಸೋಫಿಯಾ ಕಳಕಾಪೂರ ಚಕ್ರ ಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದು, ವಿದ್ಯಾರ್ಥಿನಿಯ ಸಾಧನೆಗೆ ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು ಸೇರಿದಂತೆ ಗ್ರಾಮಸ್ಥರು ಅಭಿನಂದಿಸಿದ್ದಾರೆ.

## ಅದ್ದೂರಿ ವಾಲ್ಮೀಕಿ ಜಯಂತ್ಯುತ್ಸವ



■ವಿಜಯಸಾಕ್ಷಿ ಸುದ್ದಿ, ರೋಣ

ಮಾರನಬಸರಿ ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಕಾರ್ಯಕ್ರಮವು ಅದ್ದೂರಿಯಾಗಿ ಜರುಗಿತು. ಜಯಂತ್ಯುತ್ಸವದ ನಿಮಿತ್ತ ಬೆಳಿಗ್ಗೆ ಕುಂಭಮೇಳದೊಂದಿಗೆ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರದ ಮೆರವಣಿಗೆಯನ್ನು ನಡೆಸಲಾಯಿತು.

ಜಯಂತ್ಯುತ್ಸವದ ನಿಮಿತ್ತ ಗ್ರಾಮದಲ್ಲಿ 11 ದಿನಗಳ ಕಾಲ ಪುರಾಣ ಪ್ರವಚನಕಾರ ವೇ.ಮೂ. ಸಿದ್ದಲಿಂಗಯ್ಯ ಶಾಸ್ತ್ರೀಗಳು ಇವರ ನೇತೃತ್ವದಲ್ಲಿ ವಾಲ್ಮೀಕಿ ಮಹಾಋಷಿಗಳ ಪುರಾಣ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಧಾರ್ಮಿಕ ಗುರುಗಳು ಸೇರಿದಂತೆ ಮುಖಂಡರಾದ ಶಿವಪ್ಪ ತಳವಾರ, ಸತ್ಯಪ್ಪ ಪೂಜಾರ, ಶರಣಪ್ಪ ತಳವಾರ, ಮುದಿಯಪ್ಪ ತಳವಾರ, ಪರಸಪ್ಪ ತಳವಾರ, ಪರಸಪ್ಪ ಕಟ್ಟಿಮನಿ, ಅಶೋಕ ತಳವಾರ, ಪಕ್ಕೀರಪ್ಪ ತಳವಾರ, ಶಿವಪ್ಪ ಗುತ್ತೂರ, ಲಕ್ಷ್ಮಣ ತಳವಾರ ಸೇರಿದಂತೆ ಸಮಾಜದ ಪ್ರಮುಖರು ಭಾಗಿಯಾಗಿದ್ದರು.

### ಗದಗ ಜಿಲ್ಲಾ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ

## ಸುರೇಶ ಬಾಳಿಕಾಯಿ ಅಧ್ಯಕ್ಷ, ಸಿದ್ದು ಗುಡಿಮನಿ ಉಪಾಧ್ಯಕ್ಷ







■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗದಗ ಜಿಲ್ಲಾ ನರೇಗಾ ನೌಕರರ ಕ್ಷೇಮಾಭಿವೃದ್ಧಿ (ನೇವಾಕ್) ಸಂಘದ ಪದಾಧಿಕಾರಿಗಳನ್ನು ಶುಕ್ರವಾರ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಜಿಲ್ಲಾ ಅಧ್ಯಕ್ಷರಾಗಿ ಸುರೇಶ ಬಾಳಿಕಾಯಿ, ಉಪಾಧ್ಯಕ್ಷರಾಗಿ ಸಿದ್ದು ಗುಡಿಮನಿ, ರಾಜ್ಯ ಸಂಘಕ್ಕೆ ಜಿಲ್ಲಾ ಪ್ರತಿನಿಧಿಯಾಗಿ ಕಿರಣಕುಮಾರ ಎಸ್. ಎಚ್., ಜಿಲ್ಲಾ ಸಂಘದ ಖಜಾಂಚಿಯಾಗಿ ವೀರೇಶ ಪಟ್ಟಣಶೆಟ್ಟಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ಫಕ್ಕೀರೇಶ ನಿಟ್ಟಾಲಿ, ಕಾರ್ಯದರ್ಶಿಗಳಾಗಿ ಅರುಣ ತಂಬ್ರಳ್ಳಿ ಮತ್ತು ಅರುಣ ಸಿಂಗ್ರಿ, ಉಪಕಾರ್ಯದರ್ಶಿಯಾಗಿ ಹರೀಶ ಸೊಬರದ ಮತ್ತು ಮಾಧ್ಯಮ ಸಂಯೋಜಕರಾಗಿ ವೀರೇಶ ಬಸನಗೌಡ್ರ ಆಯ್ಕೆ ಆಗಿದ್ದಾರೆ.

ತಾಲೂಕು ಪ್ರತಿನಿಧಿಗಳಾಗಿ ನವೀನ ಬಸರಿ (ಗದಗ), ಪ್ರಕಾಶ ಮ್ಯಾಕಲ್ (ಗಜೇಂದ್ರಗಡ), ಲಿಂಗರಾಜ ಅರಿಷಿಣದ (ಲಕ್ಷ್ಮೇಶ್ವರ), ಮೋಹನ ಹೊಂಬಳ (ಮುಂಡರಗಿ), ಶಾಂತಾ ತಿಮ್ಮರಡ್ಡಿ (ರೋಣ), ಹನುಮಂತ ಡಂಬಳ (ನರಗುಂದ), ಗುರು ಪಕ್ಕೀರಗೌಡ (ಶಿರಹಟ್ಟಿ) ಆಯ್ಕೆಯಾಗಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದವ**

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆ–2013ರ ರಿತ್ಯಾ ಇನ್‌ಸ್ಯಾನಟರಿ ಶೌಚಾಲಯಗಳನ್ನು ಕಟ್ಟುವಂತಿಲ್ಲ ಮತ್ತು ನಿರ್ವಹಿಸುವಂತಿಲ್ಲ ಹಾಗೂ ಬಳಸುವಂತಿಲ್ಲ ಹಾಗೂ ತಲೆಯ ಮೇಲೆ ಮಲ ಹೊರುವದಾಗಲಿ, ಮಲ ಹೊರುವ ಪದ್ಧತಿಗೆ ಪ್ರಚೋದನೆ ನೀಡುಯವುದನ್ನು ನಿಷೇಧಿಸಲಾಗಿದೆ.

ಈ ಕಾಯ್ದೆ ಸೆಕ್ಷನ್ (33) ರಿತ್ಯಾ ಕೆಲಸಗಾರರು ಬರಿಗೈಯಿಂದ ಸ್ವಚ್ಛ ಮಾಡುವದನ್ನು ನಿರ್ಮೂಲನೆ ಮಾಡುವ ದೃಷ್ಟಿಯಿಂದ ಒಳಚರಂಡಿ ಸೆಪ್ಟಿಕ್ ಟ್ಯಾಂಕ್‌ಗಳು ಹಾಗೂ ಇತರೆ ಜಾಗಗಳನ್ನು ಸೂಕ್ತ ಸಲಕರಣೆಗಳನ್ನು ಬಳಸಿ ಸ್ವಚ್ಛ ಮಾಡಿಸುವುದು ಕಡ್ಡಾಯವಾಗಿರುತ್ತದೆ. ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಒಳಚರಂಡಿ ಸೆಪ್ಟಿಕ್ ಟ್ಯಾಂಕ್‌ಗಳು ಇತರೆ ಜಾಗಗಳನ್ನು ಬರಿಗೈಯಿಂದ ಸ್ವಚ್ಛಗೊಳಿಸುವ ಕೆಲಸಕ್ಕೆ ಯಾವುದೇ ಕೆಲಸಗಾರರನ್ನು ಯಾರೂ ನೇಮಿಸಿಕೊಳ್ಳತಕ್ಕದ್ದಲ್ಲ ಹಾಗೂ ಒಳಚರಂಡಿ ಸೆಪ್ಟಿಕ್ ಟ್ಯಾಂಕ್‌ಗಳನ್ನು ಹಾಗೂ ಇತರೆ ಸ್ವಚ್ಛತೆ ಮಾಡಿಸಲು ಇಚ್ಛಿಸುವ ಸಾರ್ವಜನಿಕರು ಮುಳಗುಂದ ಪಟ್ಟಣ ಪಂಚಾಯತಿಯಲ್ಲಿರುವ ಸಕ್ಕಿಂಗ್/ ಜೆಟ್ಟಿಂಗ್ ಮಷಿನ್ ಸೌಲಭ್ಯವನ್ನು ಪಡೆದುಕೊಂಡು ಯಾಂತ್ರಿಕೃತವಾಗಿ ಸ್ವಚ್ಛ ಮಾಡಿಸಲು ಈ ಮೂಲಕ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯತ್ ಮುಳಗುಂದ ಸಹಾಯವಾಣಿ ಸಂಖ್ಯೆ:08372–230128ಗೆ ಸಂಪರ್ಕಿಸಬಹುದಾಗಿದೆ.

### ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

# ಶೇಂಗಾ ಖರೀದಿ ಪ್ರಕ್ರಿಯೆ ಪ್ರಾರಂಭಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

2024–25ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಹುಟ್ಟುವಳಿ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.



ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2024–25ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಚುಡಿ ಕೃಷಿ ಹುಟ್ಟುವಳಿಯಿಂದ ಶೇಂಗಾ ಖರೀದಿಸುವ ಕುರಿತು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಆದೇಶದನುಸಾರ ರೈತರು ನೋಂದಣಿ ಕಾಲಾವಧಿಯನ್ನು 45 ದಿನಗಳವರೆಗೆ ಮತ್ತು ಖರೀದಿ ಅವಧಿಯನ್ನು 90 ದಿನಗಳವರೆಗೆ ನೊಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆ ಪ್ರಾರಂಭಿಸಬೇಕು. ಜಿಲ್ಲೆಯಲ್ಲಿ ತೆರೆಯಲಾಗುವ ಶೇಂಗಾ ಹುಟ್ಟುವಳಿ ಖರೀದಿ ಕೇಂದ್ರಗಳಲ್ಲಿ ಖರೀದಿಸಲಾಗುವ ಎಫ್.ಎ.ಕ್ಯೂ ಗುಣಮಟ್ಟ ಪರಿಶೀಲನೆಗೆ ಗ್ರೇಡರ್‌ಗಳನ್ನು ನೇಮಕ ಮಾಡಬೇಕು ಮತ್ತು ಅವರಿಗೆ ಎಫ್‌ಎಕ್ಯೂ ಗ್ರೇಡಿಂಗ್ ತರಬೇತಿ ನೀಡಬೇಕು. ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 3 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಶೇಂಗಾ ಖರೀದಿಸಬೇಕು. ಬೆಂಬಲ ಬೆಲೆಯಲ್ಲಿ ಶೇಂಗಾ ಹುಟ್ಟುವಳಿ ಖರೀದಿಯ ಕುರಿತು ರೈತರಿಗೆ ತಿಳುವಳಿಕೆ ನೀಡಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಆರ್.ಬಂಡಿ ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ 6,783ರಂತೆ ದರ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಆದೇಶದನ್ವಯ 24–10–2024ರನುಸಾರ ನ್ಯಾಫೆಡ್ ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಮತ್ತು ಕರ್ನಾಟಕ ಸಹಕಾರಿ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯಾಗಿ ನೇಮಿಸಲಾಗಿದೆ. ರೈತರು ನೋಂದಣಿ ಕಾಲಾವಧಿಯನ್ನು 45 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಜರುಗಿಸಲಾಗುವುದು ಎಂದರು.

ಜಿಲ್ಲೆಯ 10 ಕಡೆಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಉಪನಿಬಂಧಕರು, ಕೆಓಎಫ್ ವ್ಯವಸ್ಥಾಪಕರು ಹಾಜರಿದ್ದರು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಯನ್ವಯ ಜಿಲ್ಲೆಯ 10 ಕಡೆಗಳಲ್ಲಿನ ಶೇಂಗಾ ಖರೀದಿ ಕೇಂದ್ರಗಳು: ಗದಗ: ಬಳಗಾನೂರು, ಹೊಂಬಳ, ಮುಳಗುಂದ :ಶಿರಹಟ್ಟಿ– ರಣತೂರ, ಶಿಗ್ಲಿ, ರೋಣ ಅಬ್ಬಿಗೇರಿ, ಸೂಡಿ:ನರಗುಂದ–ಕಣಕಿಕೊಪ್ಪ, ಮುಂಡರಗಿ–ಬರದೂರು, ಕಲಕೇರಿ.

### ಜ. ತೋಂಟದಾರ್ಯ ಕೈಗಾರಿಕೆ ತರಬೇತಿ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಣೆ ಕೈಗಾರಿಕೆ

# ಶ್ರೀಗಳ ಕಾರ್ಯ ಶಾಶ್ವತವಾಗಿದೆ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮೀಣ ಭಾಗದಲ್ಲಿ ಐಟಿಐ ಕಾಲೇಜು ತೆರೆದು ಬಡವರ ಮಕ್ಕಳಿಗೆ ಆಶ್ರಯದಾತರಾಗಿದ್ದ ಲಿಂ.ಡಾ. ಜಗದ್ಗುರು ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ದೂರದೃಷ್ಟಿಯ 12ನೇ ಶತಮಾನದ ವಿಶ್ವಗುರು ಬಸವೇಶ್ವರರ ಕಾಯಕ ತತ್ವದಂತೆ ಉತ್ತಮ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸಿದ ಶ್ರೀಗಳ ಕಾರ್ಯ ಶಾಶ್ವತವಾಗಿದೆ ಎಂದು ಟೋಯೊಟೊ ಕಿರ್ಲೋಸ್ಕರ್ ಕಂಪನಿಯ ಎಚ್‌ಆರ್ ಮಧು ಎಮ್.ಎನ್ ಹೇಳಿದರು.



ಡಂಬಳ ಗ್ರಾಮದ ಜಗದ್ಗುರು ತೊಂಟದಾರ್ಯ ಕೈಗಾರಿಕೆ ತರಬೇತಿ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ವೃತ್ತಿ ಪ್ರಮಾಣಪತ್ರ ವಿತರಣೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಟೋಯೊಟಾ ಕಿರ್ಲೋಸ್ಕರ ಮೋಟರ್ಸ್ ತರಬೇತುದಾರ ಸಂತೋಷ ಕುಮಾರ ಮಾತನಾಡಿ, ಎಸ್.ಎಸ್.ಎಲ್.ಸಿ ಪಾಸದ ವಿದ್ಯಾರ್ಥಿಗಳು ಬಹಳ ಮಂದಿ ಪಿಯುಸಿಯಂತಹ ಸಾಂಪ್ರಾದಾಯಿಕ ಕೋರ್ಸ್‌ಗಳ ಅಧ್ಯಯನದ ಕಡೆಗೆ ಗಮನ ಹರಿಸುತ್ತಾರೆ. ಆದರೆ ಕೇವಲ ಎರಡು ವರ್ಷಗಳ ವ್ಯಾಸಂಗ ಮಾಡಿದರೆ ಸಾಕು ಉದ್ಯೋಗ ಪಡದು ತಮ್ಮ ಕಾಲ ಮೇಲೆ ತಾವು ನಿಂತುಕೊಳ್ಳವಂತಹ ವೃತ್ತಿಪರ ಶಿಕ್ಷಣಕ್ಕೆ ವಿದ್ಯಾರ್ಥಿಗಳು ಆದ್ಯತೆ ನೀಡಬೇಕು ಎಂದು ಹೇಳಿದರು.

ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಮಾತನಾಡಿ, ಈ ಸಂಸ್ಥೆಯಲ್ಲಿ ವೃತ್ತಿ ಶಿಕ್ಷಣ ಪಡೆದ ಅಸಂಖ್ಯಾತ ವಿದ್ಯಾರ್ಥಿಗಳು ದೇಶ–ವಿದೇಶದಲ್ಲಿ ಉನ್ನತ ಹುದ್ದೆಯಲ್ಲಿದ್ದಾರೆ. ಕೆಲವರು ಸ್ವಂತ ಉದ್ಯೋಗ ಮಾಡುತ್ತಿದ್ದಾರೆ. ಲಿಂ.ತೋಂಟದ ಸಿದ್ದಲಿಂಗ ಸ್ವಾಮೀಜಿ ಡಂಬಳದಲ್ಲಿ ಮಾಡಿದ ಕೃಷಿ, ತೇೞಟಗಾರಿಕೆ ಬೆಳೆಗಳಿಂದ ರೈತರಿಗೆ ಪ್ರೇರಣೆಯಾಯಿತು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜು ಪ್ರಾಚಾರ್ಯ ಎಸ್.ಎಂ. ಶಿವರಾಚಯ್ಯ, ಗ್ರಾಮೀಣ ಭಾಗದ ಬಡವರ, ಹಿಂದುಳಿದ ವರ್ಗದ ಹಲವು ವಿದ್ಯಾರ್ಥಿಗಳು ಇಲ್ಲಿ ವೃತ್ತಿ ಶಿಕ್ಷಣ ಪಡೆಯುತ್ತಿದ್ದಾರೆ ಎಂದರು.

ಜುಲೈ 2024ರಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ವೃತ್ತಿ ಪ್ರಮಾಣಪತ್ರ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ತರಬೇತಿದಾರರಾದ ಆರ್.ವಿ. ಪಾಟೀಲ, ಎಸ್.ನಾಲವತ್ತವಾಡಮಠ, ಐ.ಎಸ್. ಯಲಿಗಾರ, ಎಸ್.ಎಂ. ಇಲಕಲ್ಲ, ಆರ್.ಜಿ. ಕೊರ್ಲಹಳ್ಳಿ, ಜಿ.ಎಂ. ಬಡಿಗೇರ, ಎಂ.ಆರ್. ಕಟ್ಟಿಮನಿ. ಎಸ್.ಎಸ್. ಕುಂಬಾರ, ಬಸವರಾಜ ಬಡಿಗೇರ, ಶಿವರಾಜ ಅಣ್ಣಿಗೇರಿ, ಆರ್.ವಿ. ಗಳಗಿ, ಆರ್.ಟಿ. ನೆರಗಲ್ಲ, ಕೆ.ಜೆ. ಅಬ್ಬಿಗೇರಿ ಮುಂತಾದವರಿದ್ದರು.



ನೆಹರು ಯುವ ಕೇಂದ್ರ ಗದಗ ವತಿಯಿಂದ ಮೈ ಭಾರತದೊಂದಿಗೆ ದೀಪಾವಳಿ ಕಾರ್ಯಕ್ರಮದ ಅಂಗವಾಗಿ ಗದುಗಿನ ಎಪಿಎಮ್‌ಸಿ ಮಾರ್ಕೆಟ್‌ನಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಮೂಲಕ ಸ್ವಚ್ಛತೆಯ ಪ್ರಾಮುಖ್ಯತೆಯನ್ನು ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ರವಿಕುಮಾರ್ ಹೊಂಬಾಳಿ, ಅರುಣ್, ತೇಜಸ್ ಕನವಳ್ಳಿ , ರವಿ ನರೇಗಲ್ಲ, ಸಚಿನ್ ಇದ್ದರು.

# ಸಹಸ್ರಾರ್ಜುನ ಜಯಂತ್ಯುತ್ಸವ ಸಮಿತಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಲಕ್ಷ್ಮಣಸಾ ಸಭಾಗೃಹದಲ್ಲಿ ಗದಗ ಎಸ್‌ಎಸ್‌ಕೆ ಸಮಾಜ ಪಂಚ ಕಮಿಟಿಯ ಅಧ್ಯಕ್ಷ ಫಕೀರಸಾ ಬಾಂಡಗೆ, ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಇವರ ನೇತೃತ್ವದಲ್ಲಿ ಸಹಸ್ರಾರ್ಜುನ ಮಹಾರಾಜರ ಜಯಂತಿ ಕುರಿತು ಪೂರ್ವಬಾವಿ ಸಭೆ ಜರುಗಿತು.



ಸಭೆಯಲ್ಲಿ ನವೆಂಬರ್ 8ರಂದು ನಡೆಯಲಿರುವ 2024–25ನೇ ಸಾಲಿನ ಶ್ರೀ ಸಹಸ್ರಾರ್ಜುನ ಮಹಾರಾಜರ ಜಯಂತ್ಯುತ್ಸವ ಸಮಿತಿಗೆ ಚೇರಮನ್‌ರಾಗಿ ಸಾಗರ ಪವಾರ, ವೈಸ್ ಚೇರಮನ್‌ರಾಗಿ ಮಾಧುಸಾ ಬದಿ, ಕಾರ್ಯದರ್ಶಿಗಳಾಗಿ ಮೋಹನಸಾ ಪವಾರ, ಸಹ ಕಾರ್ಯದರ್ಶಿಗಳಾಗಿ ಕಸ್ತೂರಿಬಾಯಿ ಬಾಂಡಗೆ, ಖಜಾಂಚಿಯಾಗಿ ಪ್ರದೀಪ ಖಟವಟೆ ಇವರನ್ನು ನೇಮಕ ಮಾಡಲಾಯಿತು.

ನೂತನ ಚೇರಮನ್ ಸಾಗರ ಪವಾರ ಮಾತನಾಡಿ, ಈ ಬಾರಿ ನಡೆಯುವ ಸಹಸ್ರಾರ್ಜುನ ಮಹಾರಾಜರ ಜಯಂತಿ ಉತ್ಸವದಲ್ಲಿ ಸುಗಮ ಸಂಗೀತ, ರಸಮಂಜರಿ ಕಾರ್ಯಕ್ರಮ, ಬೆಳಿಗ್ಗೆ ಬೈಕ್ ರ್‍ಯಾಲಿ, ಸಂಜೆ ಸಹಸ್ರಾರ್ಜುನ ಮಹಾರಾಜರ ಬೆಳ್ಳಿಯ ಮೂರ್ತಿ ಹಾಗೂ ಭಾವಚಿತ್ರ ಮೆರವಣಿಗೆ, ನಂತರ ಮಹಾಪ್ರಸಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಗದಗ ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿಯ ಸದಸ್ಯರುಗಳಾದ ಸುರೇಶಕುಮಾರ ಬದಿ, ಮೋತಿಲಾಲಸಾ ಪೂಜಾರಿ, ವಿಷ್ಣುಸಾ ಶಿದ್ಲಿಂಗ, ಅನಿಲ್ ಖಟವಟೆ, ಪರಶುರಾಮ ಬದಿ, ಶ್ರೀನಿವಾಸ ಬಾಂಡಗೆ, ವಿನೋದ ಬಾಂಡಗೆ, ಪ್ರಕಾಶ ಬಾಕಳೆ, ಗಣಪತಿ ಜಿತೂರಿ, ಅಂಬಾಸಾ ಖಟವಟೆ, ಜಿ.ಎನ್. ಹಬೀಬ, ವಿಶ್ವನಾಥಸಾ ಸೋಳಂಕಿ, ಶ್ರೀಕಾಂತ ಬಾಕಳೆ, ನಾಗರಾಜ ಖೋಡೆ, ಶ್ರೀಕಾಂತ ಅರಸಿದ್ಧಿ, ಭೀಮಾ ಕಾಟಿಗರ, ಸಂತೋಷ ಖಟವಟೆ, ರಾಘು ಬಾಂಡಗೆ, ಜಗದೀಶ ಪವಾರ, ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.


## ಗ್ರಾಮ ಪಂಚಾಯತ,ಕಾರ್ಯಾಲಯ, ಬೆಳಹೋಡ

ತಾಲೂಕ :–ಗದಗ ಜಿಲ್ಲಾ:–ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ:–29/10/2024

–: ದರಪಟ್ಟಿ ಪ್ರಕಟಣೆ :–

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬೆಳಹೋಡ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಬೆಳಹೋಡ ಗ್ರಾಮದ ಪುರದಪ್ಪ ಹೊಸಳ್ಳಿ ಸರಕಾರಿ ಪ್ರೌಢ ಶಾಲಾ ಮೈದಾನ ಅಭಿವೃದ್ಧಿ ಪಡಿಸುವುದು | 233837 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ಬೆಳಹೋಡ ಗ್ರಾಮದ ಪುರದಪ್ಪ ಹೊಸಳ್ಳಿ ಸರಕಾರಿ ಪ್ರೌಢ ಶಾಲೆಗೆ ಶಾಲಾ ಕೌಂಪೌಂಡ ನಿರ್ಮಾಣ | 255337 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;–29/10/2024 ರಿಂದ 11/11/2024 ರವರೆಗೆ ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ:–11–11–2024 ,ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;–11–11–2024 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:–11–11–2024 ರ ಮಧ್ಯಾಹ್ನ 4.00 ಗಂಟೆ

ನಿಬಂಧನೆಗಳು

1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬೆಳಹೋಡ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/– **ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಬೆಳಹೋಡ

ಸಹಿ ಆಗಿದೆ/– **ಅಧ್ಯಕ್ಷರು** ಗ್ರಾಮ ಪಂಚಾಯತಿ ಬೆಳಹೋಡ


# NAAC ಮಂಡಳಿ ಭೇಟಿ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಜಯ ಲಲಿತ ಕಲಾ ಸಂಸ್ಥೆಯ ವಿಜಯ ಫೈನ್ ಆರ್ಟ್ಸ್ ಕಾಲೇಜಿಗೆ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತೆ ಮಂಡಳಿ (NAAC) ಸದಸ್ಯರು ಭೇಟಿ ನೀಡಲಿದ್ದಾರೆ. ಈ ಮಂಡಳಿ ಎರಡು ದಿನಗಳ ಕಾಲ ಕಾಲೇಜಿನ ವಿವಿಧ ಚಟುವಟಿಕೆಗಳ ಬಗ್ಗೆ ಗಮನಿಸಿ, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು, ಹಳೆಯ ವಿದ್ಯಾರ್ಥಿಗಳು ಹಾಗೂ ಪಾಲಕರೊಂದಿಗೆ ಸಭೆ ನಡೆಸಲಿದೆ.

ಈ ಮಂಡಳಿಯಲ್ಲಿ ದೆಹಲಿ ವಿಶ್ವವಿದ್ಯಾಲಯದ ಮುಖ್ಯಸ್ಥರಾದ ಡಾ. ದೀಪ್ತಿ ಭಲ್ಲಾ ಅಧ್ಯಕ್ಷರಾಗಿ, ಅಸ್ಸಾಂ ವಿಶ್ವವಿದ್ಯಾಲಯದ ಉಪನ್ಯಾಸಕರಾದ ಡಾ. ಪೂಜಿತ ಕುಮಾರ ಪಾಟೀಲ ಸದಸ್ಯರಾಗಿ, ಮಹಾರಾಷ್ಟ್ರದ ನಳಂದ ನೃತ್ಯ ಕಲಾ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಉಮಾ ರೆಲೆ ಸದಸ್ಯರಾಗಿ ಆಗಮಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ವಿಜಯ ಫೈನ್ ಆರ್ಟ್ ಕಾಲೇಜಿನ ಸಿಬ್ಬಂದಿ ವರ್ಗ, ಹಳೆ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಮತ್ತು ಪಾಲಕರು ಪಾಲ್ಗೊಳ್ಳಲಿದ್ದಾರೆ.

## ಬೆಂಗಳೂರು: BMTC ಚಾಲಕ, ನಿರ್ವಾಹಕನ ಮೇಲೆ ಹಲ್ಲೆ, ತಿಂಗಳಲ್ಲಿ 3ನೇ ಪ್ರಕರಣ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು,** BMTC ಚಾಲಕ ಮತ್ತು ನಿರ್ವಾಹಕರ ಮೇಲೆ ಇಬ್ಬರು ಬೈಕ್ ಸವಾರರು ಹಲ್ಲೆ ನಡೆಸಿರುವ ಘಟನೆ ಟ್ಯಾನರಿ ರಸ್ತೆಯಲ್ಲಿ ಶನಿವಾರ ನಡೆದಿದೆ. ಇದು ಬಿಎಂಟಿಸಿ ಸಿಬ್ಬಂದಿ ಈ ತಿಂಗಳಲ್ಲಿ ನಡೆದ 3ನೇ ಪ್ರಕರಣವಾಗಿದೆ. ಟ್ಯಾನರಿ ರಸ್ತೆಯ ಕೆನರಾ ಬ್ಯಾಕ್ ಬಸ್ ನಿಲ್ದಾಣದಲ್ಲಿ ಘಟನೆ ನಡೆದಿದೆ.


## ಗ್ರಾಮ ಪಂಚಾಯತ,ಕಾರ್ಯಾಲಯ, ಬಳಗಾನೂರ

ತಾಲೂಕ :–ಗದಗ ಜಿಲ್ಲಾ:–ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ:–29/10/2024

–: ದರಪಟ್ಟಿ ಪ್ರಕಟಣೆ :–

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬಳಗಾನೂರು ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಬಳಗಾನೂರ ಗ್ರಾಮದ ಸರಕಾರಿ ಹೆಣ್ಣು ಮಕ್ಕಳ ಶಾಲಾ ಕಂಪೌಂಡ ನಿರ್ಮಾಣ | 233837 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ಬಳಗಾನೂರ ಗ್ರಾಮದ ಸರಕಾರಿ ಗಂಡು ಮಕ್ಕಳ ಶಾಲಾ ಕಂಪೌಂಡ ನಿರ್ಮಾಣ | 233837 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;–29/10/2024 ರಿಂದ 11/11/2024 ರವರೆಗೆ ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ:–11–11–2024 ,ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;–11–11–2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:–11–11–2024 ರ ಮಧ್ಯಾಹ್ನ 4.00ಗಂಟೆ

ನಿಬಂಧನೆಗಳು

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬಳಗಾನೂರ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/– **ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಬಳಗಾನೂರ

ಸಹಿ ಆಗಿದೆ/– **ಅಧ್ಯಕ್ಷರು** ಗ್ರಾಮ ಪಂಚಾಯತಿ ಬಳಗಾನೂರ

## ಗ್ರಾಮ ಪಂಚಾಯತ,ಕಾರ್ಯಾಲಯ, ಕದಡಿ

ತಾಲೂಕ :–ಗದಗ ಜಿಲ್ಲಾ:–ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ:–29/10/2024

–: ದರಪಟ್ಟಿ ಪ್ರಕಟಣೆ :–

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕದಡಿ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಕದಡಿ ಗ್ರಾಮದ ಸರಕಾರಿ ಪ್ರೌಢ ಶಾಲೆಗೆ ಕಂಪೌಂಡ್ ನಿರ್ಮಾಣ | 286915 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;–29/10/2024 ರಿಂದ 11/11/2024 ರವರೆಗೆ ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ:–11–11–2024 ,ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;–11–11–2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:–11–11–2024 ರ ಮಧ್ಯಾಹ್ನ 4.00ಗಂಟೆ

**ನಿಬಂಧನೆಗಳು**

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಕದಡಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/– **ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಕದಡಿ

ಸಹಿ ಆಗಿದೆ/– **ಅಧ್ಯಕ್ಷರು** ಗ್ರಾಮ ಪಂಚಾಯತಿ ಕದಡಿ

## ಪಟ್ಟಣ ಪಂಚಾಯತ ಕಾರ್ಯಾಲಯ, ಶಿರಹಟ್ಟಿ

**ಕ್ರಸಂ:ಪಪಂಶಿ/15ನೇಹಸಾಮೂಅಎಸ್.ಎಫ್.ಸಿ/ಟೆಂಡರ/2024–25/3 ದಿನಾಂಕ:28–10–2024**

**ಅಲ್ಪಾವಧಿ ಟೆಂಡರ್ ಪ್ರಕಟಣೆ (ಇ–ಪ್ರೊಕ್ಯೂರಮೆಂಟ್ ಮೂಲಕ)**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಶಿರಹಟ್ಟಿ ಇವರಿಂದ ಶಿರಹಟ್ಟಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ–2000ರ ಪ್ರಕಾರ "ಕರ್ನಾಟಕ ಪಬ್ಲಿಕ–ಪ್ರೊಕ್ಯೂರ್‌ಮೆಂಟ್" ಪದ್ಧತಿಯಲ್ಲಿ ಸನ್ 2024–25 ನೇ ಸಾಲಿನ 15ನೇ ಹಣಕಾಸು ಅನುದಾನ ಅನುದಾನದ ಇಂಡೆಂಟ್ ನಂ–21674CALL2 ಈ ಕೆಳಗೆ ನಮೂದಿಸಿದ ಕಾಮಗಾರಿಗಳ ಒಟ್ಟು ಮೊತ್ತ ರೂ 33.00 ಲಕ್ಷ ನಿರ್ವಹಣೆಗಾಗಿ ಕೆ.ಡಬ್ಲ್ಯು–1 & 2 ದಸ್ತಾವೇಜ್‌ನಲ್ಲಿ ಕರ್ನಾಟಕ ಪಬ್ಲಿಕ ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಹಾಗೂ ಇಂಧನ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಅಹ್ವಾನಿಸಲಾಗಿದೆ. ಪ್ರೋಕ್ಯೂರಮೆಂಟ್ ದಾಖಲೆಗಳಿಗಾಗಿ **https://kppp.karnataka.gov.in/#/portal/portal-home** ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ ಸಲ್ಲಿಸುವುದು.

(1) ಇ–ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ ಸಲ್ಲಿಸುವ ಕೊನೆಯ ದಿನಾಂಕ : **06–11–2024 ಸಂಜೆ 5–00ರ ವರೆಗೆ**

(2) ಟೆಂಡರನ್ನು ತೆರೆಯುವ ದಿನಾಂಕ ಮತ್ತು ಸಮಯ : **07–11–2024 ರಂದು ಸಂಜೆ 05–30** ಗಂಟೆಗೆ.

ನಿಗಧಿಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವುದು. ಯಾವುದೇ ತಿದ್ದು ಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಛೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ. ಕಾಮಗಾರಿ ಇ.ಎಮ್.ಡಿ ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಛೇರಿಯ ವೆಬ್‌ಸೈಟ್ **www.shirahattitown.gov.in.** ಹಾಗೂ ಕಛೇರಿ ವೇಳೆಯಲ್ಲಿ ಸಂಬಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ–ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ ಹಾಗೂ ಟೆಂಡರ ಮಂಜೂರು ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/– ಶ್ರೀ ಸಿದ್ದರಾಯ ಕಟ್ಟಿಮನಿ ಮುಖ್ಯಾಧಿಕಾರಿ ಪಟ್ಟಣ ಪಂಚಾಯತ ಶಿರಹಟ್ಟಿ**

**ಸಹಿ/– ಶ್ರೀಮತಿ ದೇವಕ್ಕ ತಾಯಿ ಯಲ್ಲವ್ವ ಗುಡಿಮನಿ ಅಧ್ಯಕ್ಷರು ಪಟ್ಟಣ ಪಂಚಾಯತ ಶಿರಹಟ್ಟಿ**

**ವಾ.ಸಾ.ಇ/ಗದಗ/336/ದೇಶಪಾಂಡೆಪಬ್ಲಿಸಿಟಿ/2024–25**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka